ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
EMAIL : dairyadadaari@gmail.com ಸಂಪುಟ: 01 ಸಂಚಿಕೆ: 26
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಗುರುವಾರ: 01-01-2026

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ತುಂಗಭದ್ರ ನದಿಯ ನೀರು ಇಂದು ಕುಡಿಯುವುದಕ್ಕೂ ಕೂಡ ಯೋಗ್ಯವಾಗಿ ಉಳಿದಿಲ್ಲ: ಮಹಿಮಾ ಪಾಟೀಲ್

ಧೈರ್ಯದ ದಾರಿ

**ಮಾನ್ವಿ,ಡಿ.31–** ತಾಲೂಕಿನ ಪೋತ್ನಾಳ್ ಗ್ರಾಮ ದಲ್ಲಿನ ಶ್ರೀ ಕನ್ನಿಕಾಪರಮೇಶ್ವರಿ ದೇವಸ್ಥಾನದಲ್ಲಿ ರಾಷ್ಟ್ರೀಯ ಸ್ವಾಭಿಮಾನ ಆಂದೋಲನ ನವದೆಹಲಿ ಹಾಗೂ ಪರ್ಯಾವರಣ ಟ್ರಸ್ಟ್ ಶಿವಮೊಗ್ಗ,ನಿರ್ಮಲ ತುಂಗಭದ್ರಾ ಅಭಿಯಾನ ಸಮಿತಿ ಸಂಯುಕ್ತಾಶ್ರಯದಲ್ಲಿ ನಡೆದ ನಿರ್ಮಲ ತುಂಗಭದ್ರಾ ಅಭಿಯಾನ 3 ನೇ ಹಂತದ ಜಲಜಾಗೃತಿ–ಜನಜಾಗ್ರತಿ ಪಾದಯಾತ್ರೆ ಕಾರ್ಯಕ್ರಮದ ವೇದಿಕೆ ಕಾರ್ಯಕ್ರಮಕ್ಕೆ 3 ನೇ ಹಂತದ ನಿರ್ಮಲ ತುಂಗಭದ್ರಾ ಅಭಿಯಾನ ಸಂಚಾಲಕರಾದ ಮಹಿಮಾ ಪಾಟೀಲ್ ಉದ್ಘಾಟಿಸಿ ಮಾತನಾಡಿ ದೇಶದಲ್ಲಿನ 16 ಸಾವಿರ ನದಿಗಳಲ್ಲಿ 6 ಸಾವಿರ ನದಿಯ ಮೂಲ ಉಗಮ ಸ್ಥಾನಗಳು ನಿರಂತರ ಪರಿಸರದ ಮೇಲಿನ ಮಾನವರ ದಾಳಿ ಹಾಗೂ ಮಾಲಿನ್ಯದಿಂದಾಗಿ ಕಣ್ಮರೆಯಾಗಿವೆ ರಾಜ್ಯದಲ್ಲಿ ಇದ್ದ 36 ನೈಸರ್ಗಿಕ ಕೇರೆಗಳಲ್ಲಿ ಇಂದು ಕೇವಲ 3 ಸಾವಿರ ಕೆರೆಗಳು ಮಾತ್ರ ಉಳಿದುಕೊಂಡಿವೇ. ರಾಜ್ಯದಲ್ಲಿ ಹರಿಯುವ ಪ್ರಮುಖ ನದಿಗಳಾದ ತುಂಗಭದ್ರ ಪಶ್ಚಿಮ ಘಟದಲ್ಲಿನ ಶೃಂಗೇರಿಯಿಂದ 15 ಕಿ.ಮೀ.ದೂರದ ವರಹ ಪರ್ವತದಲ್ಲಿನ ಗಂಗಡಿಯಲ್ಲಿ ಉಗಮವಾಗುತ್ತದೆ ಹಾಗೂ 718 ಕಿ.ಮೀ ಹರಿದು ಸಮುದ್ರವನ್ನು ಸೇರುತ್ತದೆ ರಾಜ್ಯದಲ್ಲಿ 693 ಕಿ.ಮೀ. ತುಂಗಭದ್ರ ನದಿ ಹರಿಯುತ್ತದೆ.ಕೃಷ್ಣ ನದಿ 483 ಕಿ.ಮೀ, ಕಾವೇರಿ ನದಿ 320



ಕಿ.ಮೀ.ಹರಿಯುತ್ತದೆ ರಾಜ್ಯದಲ್ಲಿ ಹೆಚ್ಚಿನ ವಿಸ್ತೀರ್ಣ ದಲ್ಲಿ ಹರಿಯುವ ತುಂಗಭದ್ರ ನದಿ ಯ ಉಗಮ ಸ್ಥಾನದಲ್ಲಿ ಅನೇಕ ಯೋಜನೆಗಳ ಒತ್ತಡ, ತುಂಗಭದ್ರ ನದಿ ತೀರದಲ್ಲಿನ ಶೃಂಗೇರಿಯಿಂದ ಹರಿಹರದ ವರೆಗಿನ ಅತಿಹೆಚ್ಚಿನ ಪುಣ್ಯ ಕ್ಷೇತ್ರಗಳಿರುವುದರಿಂದ ಇಂತಹ ಕ್ಷೇತ್ರಗಳಿಗೆ ಪ್ರತಿನಿತ್ಯ ಲಕ್ಷಾಂತರ ಭಕ್ತರು ಆಗಮಿಸುವುದರಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ಸಂಸ್ಕಾರಿಸಿ ನದಿಗೆ ಬಿಡದೆ ಇರುವುದರಿಂದ ಹಾಗೂ ನದಿ ತೀರದಲ್ಲಿನ ನಗರ.ಪಟ್ಟಣಗಳ ತ್ಯಾಜ್ಯವನ್ನು ಸಂಸ್ಕಾರಿಸಿ ನದಿಗೆ ಬಿಡದೆ ನೇರವಾಗಿ ಬಿಡುತ್ತಿರು ವುದರಿಂದ ನದಿಯ ನೀರು ಇಂದು ಕುಡಿಯು ವುದಕ್ಕೂ ಕೂಡ ಯೋಗ್ಯವಾಗಿ ಉಳಿದಿಲ್ಲ.ನದಿಯ ನ್ನು ಭಾವನತ್ಮಕವಾಗಿ ನೋಡದೆ ಪರಿಸರತ್ಮಕವಾಗಿ ನೋಡಬೇಕು. ನಮ್ಮ ರಾಜ್ಯದಲ್ಲಿ ಉಳಿದಿರುವ ನದಿ,ಕೆರೆ,ಹಾಗೂ ನೀರಿನ ಜಲ ಮೂಲಗಳನ್ನು ಸ್ವಚ್ಚವಾಗಿ ಶುದ್ದವಾಗಿ ಉಳಿಸಿಕೊಳ್ಳಬೇಕಾಗಿದೆ ಅದ್ದರಿಂದ ನಿರ್ಮಲ ತುಂಗಭದ್ರಾ ಅಭಿಯಾನವನ್ನು 4 ಹಂತಗಳಲ್ಲಿ ಮಾಡಲಾಗುತ್ತಿದ್ದು 6ನೂರು ಕಿ.ಮೀ.ಪಾದಯಾತ್ರೆ ಮೂಲಕ ಜಲಜಾಗೃತಿ–ಜನಜಾಗ್ರತಿಯನ್ನು ಮೂಡಿಸುವುದರೊಂದಿಗೆ ಪಾದಯಾತ್ರೆಯಲ್ಲಿ ಭಾಗವಹಿಸಿರುವ ತಜ್ಞರು ತುಂಗಭದ್ರನದಿಯನ್ನು ಅಧ್ಯಾಯನ ಮಾಡಿ ವರದಿಯನ್ನು ಸಿದ್ದಪಡಿಸಿ ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ರಾಷ್ಟ್ರೀಯ ಸ್ವಾಭಿಮಾನ ಆಂದೋಲನ ಸಮಿತಿಯ ರಾಷ್ಟ್ರೀಯ ಅಧ್ಯಕ್ಷರಾದ ಬಸವರಾಜ್ ಪಾಟೀಲ್ ವೀರಾಪುರ ಮಾತನಾಡಿ ನಮ್ಮ ಸಂಸ್ಥೆಯು ದೇಶದಲ್ಲಿನ 80 ನದಿಗಳು

ಅಪಾಯದಲ್ಲಿರುವುದನ್ನು ಗುರುತಿಸಿ ಅವುಗಳಲ್ಲಿ ಗಂಗೆ,ಯಮುನೆ,ಚಂಬಲ್, ಸೇರಿದಂತೆ ಇತರ ನದಿಗಳ ಸ್ವಚ್ಚತೆಗೆ ಕ್ರಮ ಕೈಗೊಳ್ಳಲಾಗಿದೆ ನಮ್ಮ ದೇಶದ ನದಿಗಳಿಗೆ ತನ್ನದೆ ಆದ ಇತಿಹಾಸ ಪವಿತ್ರ ತೆ, ಹರಿಯುವ ಮಾರ್ಗ ಮತ್ತು ಸಮುದ್ರವನ್ನು ಸೇರುವ ಸಂಗನ ಸ್ಥಳವಿರುತ್ತದೆ ಅದ್ದರಿಂದ ನದಿಗಳ ಮಾರ್ಗ ಬದಲಾವಣೆ ಹಾಗೂ ನದಿಗಳ ಜೋಡಣೆ ಮಾಡುವುದರಿಂದ ನದಿಗಳ ಅಸ್ತಿತ್ವಕ್ಕೆ ದಕ್ಕೆ ಉಂಟಾಗುವುದರಿಂದ 2ನೇಪುಟಕ್ಕೆ►

## ಗೋರ್ಕಲ್ ಶ್ರೀ ಲಕ್ಷ್ಮಿ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ವೈಭವದ ಶ್ರೀ ವೈಕುಂಠ ಏಕಾದಶಿ ಆಚರಣೆ



ಧೈರ್ಯದ ದಾರಿ

**ಮಾನ್ವಿ,ಡಿ.31–** ತಾಲೂಕಿನ ಗೋರ್ಕಲ್ ಗ್ರಾಮ ದಲ್ಲಿನ ಚಿಕ್ಕ ತಿರುಪತಿಯೆಂದು ಪ್ರಸಿದ್ದವಾಗಿರುವ ಪುಣ್ಯಕ್ಷೇತ್ರವಾದ ಶ್ರೀ ಲಕ್ಷ್ಮಿ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ಶ್ರೀ ವೈಕುಂಠ ಏಕಾದಶಿ ಅಂಗವಾಗಿ ವೈಭವದ ಶ್ರೀ ವೈಕುಂಠ ಏಕಾದಶಿ ಕಾರ್ಯಕ್ರಮಗಳು ನಡೆದವು.

ಬೆಳಿಗ್ಗೆ ದೇವಸ್ಥಾನದಲ್ಲಿನ ಗುಂಡಿನಲ್ಲಿ ಸ್ವಯಂ ಭುವಾಗಿ ಮೂಡಿರುವ ಕುಳಿತ ಬಂಗಿಯಲ್ಲಿರುವ ವಿಶೇಷವಾದ ಶ್ರೀ ವೆಂಕಟೇಶ್ವರ ಮೂರ್ತಿಗೆ ವಿಶೇಷ ಅಭಿಷೇಕ ಮತ್ತು ಅಲಂಕಾರ ನಡೆಸಲಾಯಿತು.

ಸಾವಿರಾರು ಭಕ್ತರು ಶ್ರೀ ವೈಕುಂಟ ದ್ವಾರದ ಮೂಲಕ ಶ್ರೀ ಸ್ವಯಂಭು ಶ್ರೀ ವೆಂಕಟೇಶ್ವರ ಸ್ವಾಮಿಯ ಮೂರ್ತಿಯ ದರ್ಶನವನ್ನು ಮಾಡಿಕೊಂಡು ಪೂಜೆ ಸಲ್ಲಿಸಿದರು.

## ಹೊಸ ವರ್ಷ ಕಟ್ಟೆಚ್ಚರ

4ನೇಪುಟಕ್ಕೆ►

## ಸಂಗೀತಾ ಜಿಲ್ಲಾಮಟ್ಟಕ್ಕೆ ಆಯ್ಕೆ ತಾಲೂಕ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಮುಸ್ಟೂರ್ ಶಾಲೆಯ ಮಕ್ಕಳ ಸಾಧನೆಗೆ ಮುಖ್ಯೋಪಾಧ್ಯಾಯ ಝುರೀನಾ ಹರ್ಷ

ಧೈರ್ಯದ ದಾರಿ

**ಮಾನ್ವಿ,ಡಿ.31–** ಬಲ್ಲಟಗಿಯಲ್ಲಿ ನಡೆದ ತಾಲೂಕ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದಲ್ಲಿ ಸ.ಹಿ.ಪ್ರಾ.ಶಾಲೆಯ ಮುಸ್ಟೂರು ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಸಾಧನೆಗಳ ಸುರಿಮಳೆ ಬರೆಸಿದ್ದಾರೆ. ಸಂಗೀತ ಕವನ ವಾಚನ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆಮ ಜೊತೆಗೆ ಕಿರಿಯ ವಿಭಾಗದಲ್ಲಿ ಲೇಖನ ಅಭಿನಯ ಗೀತೆಯಲ್ಲಿ ಪ್ರಥಮ, ಧಾರ್ಮಿಕ ಪಠಣ(ಅರೇಬಿಕ್) ತೃತೀಯ, ಕೀರ್ತಿ ಇಂಗ್ಲಿಷ್ ಕಂಠಪಾಠ ದ್ವಿತೀಯ ಮತ್ತು ಕಥೆ ಹೇಳುವುದರಲ್ಲಿ ದ್ವಿತೀಯ, ಹಿರಿಯ ವಿಭಾಗದಲ್ಲಿ ಅಶ್ವಿನಿ ದೇಶಭಕ್ತಿ ಗೀತೆಯಲ್ಲಿ ದ್ವಿತೀಯ ಹಾಗೂ ಅಭಿನಯ ಗೀತೆಯಲ್ಲಿ ತೃತೀಯ, ಅಂಜಲಿ ಕಥೆ ಹೇಳುವುದರಲ್ಲಿ ತೃತೀಯ, ಪ್ರೌಢ ವಿಭಾಗದಲ್ಲಿ ಗೀತಾ ಕವನ ವಾಚನ ತೃತೀಯ, ಸ್ವಾತಿ ಭಾವಗೀತೆಯಲ್ಲಿ ದ್ವಿತೀಯ







ಸ್ಥಾನ ಪಡೆದುಕೊಂಡು ಶಾಲೆಗೆ ಊರಿಗೆ ಕೀರ್ತಿ ತಂದಿದ್ದಾರೆ. ಶಾಲೆಯ ಮುಖ್ಯೋಪಾಧ್ಯಾಯ, ಶಿಕ್ಷಕ ವೃಂಧ, ಎಸ್.ಡಿ.ಎಂ.ಸಿ ಪದಾಧಿಕಾರಿಗಳು ಗ್ರಾಮಸ್ಥರು ಸಂಘ ಸಂಸ್ಥೆಗಳು ಅಭಿನಂಧಿಸಿದ್ದಾರೆ.

### ಜಿಲ್ಲಾ ಆರೋಗ್ಯ ಸಂಘದ ಸಮಿತಿ ಸಭೆಯಲ್ಲಿ ಜಿ.ಪಂ ಸಿಇಒ ಸೂಚನೆ

## ಗರ್ಭಿಣಿ, ಬಾಣಂತಿಯರಿಗೆ ಸೇವೆಗಳನ್ನು ಒದಗಿಸಲು ಶ್ರಮಿಸಿ: ಈಶ್ವರ ಕುಮಾರ

ಧೈರ್ಯದ ದಾರಿ

**ರಾಯಚೂರು,ಡಿ.31–**ಜಿಲ್ಲೆಯಲ್ಲಿ ಗರ್ಭಿಣಿ, ಬಾಣಂತಿಯರಿಗೆ ಗುಣಮಟ್ಟದ ಚಿಕಿತ್ಸೆ ನೀಡಲು ಸಂಬಂಧಿಸಿದ ಅಧಿಕಾರಿಗಳು ಶ್ರಮಿಸಬೇಕು. ಅಲ್ಲದೆ ಹೆರಿಗೆ ಸಮಯದಲ್ಲಿ ತಾಯಂದಿರಿಗೆ ರಕ್ತ ಒದಗಿಸಲು ದಾನಿಗಳ ಸಂಪರ್ಕ ಸಾಧಿಸಿ ತಾಯಿಯ ಮರಣವಾಗದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಡಿಸೆಂಬರ್ 30ರ ಮಂಗಳವಾರ ದಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಸಂಘದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗರ್ಭಿಣಿ ಅವಧಿ ಸೇರಿದಂತೆ ಹೆರಿಗೆ ಸಂದರ್ಭದಲ್ಲಿ ಸುರಕ್ಷಿತ ಹೆರಿಗೆ ಕೈಗೊಳ್ಳಲು ಅಪರೂಪದ ರಕ್ತದ ಗುಂಪು ಹೊಂದಿದ ತಾಯಂದಿರಿಗೆ ರಕ್ತ ಒದಗಿಸಲು ದಾನಿಗಳ ಸಂಪರ್ಕ ಸಾಧಿಸುವುದರೊಂದಿಗೆ ಎಲ್ಲ ಸರಕಾರಿ ಹಾಗೂ ಖಾಸಗಿ ರಕ್ತ ಬ್ಯಾಂಕ್‌ಗಳಲ್ಲಿ ತಪ್ಪದೆ ರಕ್ತವನ್ನು ಸಂಗ್ರಹಿಸಲು ಜಿಲ್ಲೆಯಾದ್ಯಂತ ಅಧಿಕಾರಿಗಳು ನಿಗಾವಹಿಸಿ, ತಾಯಿ ಮರಣವಾ ಗದಂತೆ ಶ್ರಮಿಸಬೇಕೆಂದು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.



ಜಿಲ್ಲೆಯಲ್ಲಿ ತಾಯಿಮರಣ ಗಣನಿಯವಾಗಿ ಕಡಿಮೆಯಾಗುತ್ತಿದ್ದು, ಕ್ಷೇತ್ರ ಮಟ್ಟದಲ್ಲಿ ವೈದ್ಯರಿಂದ ಹಿಡಿದು ಪಿಹೆಚ್‌ಸಿಓ, ಆಶಾ ಕಾರ್ಯಕರ್ತೆವರೆಗೆ ತಂಡವಾಗಿ ಕಾರ್ಯ ನಿರ್ವಹಿಸುತ್ತಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಮಾನ್ಯ ಮುಖ್ಯಮಂ ತ್ರಿಗಳು ಅವರ ನಿರ್ದೇಶನದಂತೆ ತಾಯಿ ಮರಣ ನಿಯಂತ್ರಣ ಕ್ರಮಗಳನ್ನು ತೆಗೆದುಕೊಂಡು ಇನ್ನಷ್ಟು ಹೆಚ್ಚಿನ ಪ್ರಮಾಣದಲ್ಲಿ ಕೆಲಸ ಮಾಡಬೇಕೆಂದರು.

ಗರ್ಭಿಣಿಯೆಂದು ತಿಳಿದ ದಿನದಂದ ಕಬ್ಬಿಣಾಂಶ ಪ್ರಮಾಣ ಕಡಿಮೆಯಾಗದಂತೆ ಕಬ್ಬಿಣಾಂಶ ಮಾತ್ರೆ, ಐರನ್ ಸುಕ್ರೋಸ್ ಒದಗಿಸುವುದು, ಅಗತ್ಯವಿದ್ದಲ್ಲಿ ರಕ್ತಪೂರಣ ಮಾಡಿಸಲು ಕ್ರಮವಹಿಸಬೇಕು. ಇತರೆ ಆರೋಗ್ಯ ಸಮಸ್ಯೆಗಳನ್ನು ಗುರ್ತಿಸಿ ಸೂಕ್ತವ ಚಿಕಿತ್ಸೆ ನೀಡಲು ತಂಡವಾಗಿ ಕಾರ್ಯನಿರ್ವಹಿಸಬೇಕೆಂದರು.

## ಉದ್ಯೋಗ ಮೇಳದ ಪೂರ್ವಭಾವಿ ಸಭೆ ಉದ್ಯೋಗ ಮೇಳ ಯಶಸ್ವಿಗೆ ಸಿದ್ಧತೆ ಮಾಡಿಕೊಳ್ಳಿ: ಶರಣಬಸವರಾಜ

ಧೈರ್ಯದ ದಾರಿ

**ರಾಯಚೂರು,ಡಿ.31–** ಜಿಲ್ಲೆಯ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಉದ್ಯೋಗ ಮೇಳ ಆಯೋಜಿಸಲಾಗಿದ್ದು, ಉದ್ಯೋಗ ಮೇಳಕ್ಕೆ ಬೇಕಾಗುವ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಅಲ್ಲದೆ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಿರುದ್ಯೋಗಿಗಳು ಭಾಗಿಯಾಗಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ನಿರ್ದೇ ಶಕರಾದ ಶರಣಬಸವರಾಜ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಡಿಸೆಂಬರ್ 31ರ ಬುಧವಾರ ದಂದು ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ಉದ್ಯೋಗ ಮೇಳದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೇಳವು ಸಂಜೀವಿನಿ–ಕೆ.ಎಸ್.ಆರ್.ಎಲ್.ಪಿ.ಎಸ್, ಡಿಡಿಯು–ಜಿಕೆ ಯೋಜನೆಯಡಿ ಜಿಲ್ಲೆಗಳಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಬೇಕಾಗಿದೆ. ಉದ್ಯೋಗ ಮೇಳದ ಅವಧಿಯಲ್ಲಿ



ಉದ್ಯೋಗದಾತ ಸುಮಾರು 75 ಸಂಸ್ಥೆಗಳನ್ನು ಆಹ್ವಾನಿಸಬೇಕಾಗಿದ್ದು, ಮೇಳದಲ್ಲಿ ಕನಿಷ್ಠ 1500 ಜನ ಅಭ್ಯರ್ಥಿಗಳಿಗೆ ಉದ್ಯೋಗವಕಾಶವನ್ನು ಕಡ್ಡಾಯವಾಗಿ ಕಲ್ಪಿಸುವ ಗುರಿಯನ್ನು ನಿಗಧಿಪಡಿಸಲಾಗಿದೆ. ಅಲ್ಲದೆ ಈ ಮೇಳದ ಎಲ್ಲಾ ಚಟುವಟಿಕೆಗಳನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್ ಮಾಡುವ ಮೂಲಕ ವ್ಯಾಪಕ ಪ್ರಚಾರ ಕಾರ್ಯಗಳನ್ನು ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕೈಗೊಳ್ಳಬೇಕು ಎಂದರು.

ಮೇಳಯು ರಾಯಚೂರಿನ ಕೃಷಿ 2ನೇಪುಟಕ್ಕೆ►

## ನಿವೃತ್ತ ಉಪ ಅರಣ್ಯ ಸಂರಕ್ಷಣಾಧಿಕಾರಿಗೆ 1.97 ಲಕ್ಷ ರೂ.ವಂಚನೆ

**ಕಲಬುರಗಿ,ಡಿ.31–**ನಿವೃತ್ತ ಉಪ ಅರಣ್ಯ ಸಂರಕ್ಷಣಾಧಿಕಾರಿಗೆ 1.97 ಲಕ್ಷ ರೂಪಾಯಿ ಆನ್‌ಲೈನ್ ವಂಚನೆ ಮಾಡಿರುವ ಪ್ರಕರಣ ಬೆಳಕಿಗೆ ಬಂದಿದೆ.ನಗರದ ಸೇಡಂ ರಸ್ತೆಯ ಸ್ವಸ್ತಿಕ ನಗರದ ನಿವಾಸಿಯಾದ ನಿವೃತ್ತ ಉಪ ಸಂರಕ್ಷಣಾಧಿಕಾರಿ ಮಲ್ಲಪ್ಪ ಭಾವಿಕಟ್ಟಿ (62) ಅವರೇ ವಂಚನೆಗೆ ಒಳಗಾಗಿದ್ದಾರೆ.

ಮಲ್ಲಪ್ಪ ಭಾವಿಕಟ್ಟಿ ಅವರಿಗೆ ಅಪರಿಚಿತ ವ್ಯಕ್ತಿಯೊಬ್ಬ ವಾಟ್ಸಪ್ ಮೂಲಕ ಕರೆ ಮಾಡಿ ಲಿಂಕ್ ಕಳುಹಿಸಿ ಅದರ ಮೇಲೆ ಕ್ಲಿಕ್ ಮಾಡಿಸಿಕೊಂಡು ಎರಡು ಬ್ಯಾಂಕ್ ಖಾತೆಗಳಿಂದ 1.97 ಲಕ್ಷ ರೂಪಾಯಿ ಗಳನ್ನು ಫೋನ್ ಪೇ ಮೂಲಕ ವಿವಿಧ ಬ್ಯಾಂಕ್ ಖಾತೆಗಳಿಗೆ ವರ್ಗಾವಣೆ ಮಾಡಿಕೊಂಡು ಮೋಸ, ವಂಚನೆ ಮಾಡಿದ್ದಾನೆ.ಮಲ್ಲಪ್ಪ ಭಾವಿಕಟ್ಟಿ ಅವರು ಈ ಸಂಬಂಧ ಸಿಇಎನ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

## ಮಾನವಿ: ಘನ ತ್ಯಾಜ್ಯ ವಿಲೇವಾರಿ ವಾಹನಕೆ ಚಾಲನೆ

ಧೈರ್ಯದ ದಾರಿ

**ಮಾನ್ವಿ,ಡಿ,31–**ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಾನ್ವಿ ನಗರದ ಪುರಸಭೆ ಕಾರ್ಯಾಲಯ ಆವರಣದಲ್ಲಿ ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಜಿ ಹಂಪಯ್ಯ ನಾಯಕ ಸಾಹುಕಾರ್ ಇವರು ಮಾನ್ವಿ ಪುರಸಭೆಯ ಘನ ತ್ಯಾಜ್ಯ ವಿಲೇವಾರಿ ವಾಹನಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾನ್ಯ ಶಾಸಕರು ಮಾನ್ವಿ ಪಟ್ಟಣದಲ್ಲಿ ದೈನಂದಿನ ಪುರಸಭೆಯಿಂದ ಆಗುತ್ತಿರುವ ಕಸವಿಲೆವಾರಿ 19.2 ಟನ್ನ ಗಳಷ್ಟು ಇದರಲ್ಲಿ ಶೇಕಡ 60ರಷ್ಟು ಹಸಿಕಸವಿದ್ದರೆ ಶೇಕಡ 40ರಷ್ಟು ಒಣಕಸವನ್ನು ಪುರಸಭೆಯ ಕಾರ್ಮಿಕರಿಂದ ಕಸವಿಲಿವಾರಿವಾಗುತ್ತಿದ್ದು. ಪುರಸಭೆ ಕಾರ್ಯಾಲಯದಲ್ಲಿ ಈಗಾಗಲೇ 11 ಆಟೋ,6 ಟ್ರ್ಯಾಕ್ಟರ್ ಗಳು, 2 ಜೆ ಸಿ ಬಿ, 1, ಕಂಪ್ಯಾಕ್ಟರ ( ಲಾರಿ ) ಈ ವಾಹನಗಳಿಂದ ಪುರಸಭೆಯ ಸಿಬ್ಬಂದಿ ವರ್ಗ ಮಾನ್ವಿ ನಗರದ ದೈನಂದಿನ ಸ್ವಚ್ಛತ ಕಾರ್ಯವನ್ನು ನಡೆಸುತ್ತಿದ್ದು. ಮುಂದಿನ ದಿನಗಳಲ್ಲಿ ಮಾನ್ವಿ ಪುರಸಭೆಯು ನಗರಸಭೆನ್ನಾಗಿ ಮೇಲ್ ದರ್ಜೆ ಏರಿದಾಗ



ಇನ್ನೂ ಬಹಳಷ್ಟು ಸಿಬ್ಬಂದಿ ವರ್ಗ ಹಾಗೂ ವಾಹನಗಳು ಮಾನ್ವಿ ನಗರಕ್ಕೆ ಬರುವ ಸಾಧ್ಯತೆಯಿದ್ದು ಇರುವ ವಾಹನಗಳಿಂದಲೇ ಮಾನ್ವಿ ನಗರವನ್ನು ಸ್ವಚ್ಛತೆ ಮಾಡುತ್ತಿರುವುದು ಸಿಬ್ಬಂದಿಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಹಾಗೂ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್,ಪಂಚ ಗ್ಯಾರೆಂಟಿಗಳ ಅಧ್ಯಕ್ಷರಾದ ಬಿಕೆ ಅಂಬರೇಶಪ್ಪ ವಕೀಲರು, ಸೈಯದ್ ಖಾಲಿದ್ ಖಾದ್ರಿ, ರಾಜಸುಭಾಷ್ ಚಂದ್ರ ನಾಯಕ್, ಜಯಪ್ರಕಾಶ್, ಡಿ ರಾಮಕೃಷ್ಣ, 2ನೇಪುಟಕ್ಕೆ►

# ಹಸಿರು ಮಾರ್ಗಕ್ಕೆ 21 ಹೊಸ ರೈಲುಗಳ ಸೇರ್ಪಡೆ



**ಬೆಂಗಳೂರು,ಡಿ.31–** ನಮ್ಮ ಮೆಟ್ರೋದ ಹಸಿರು ಮಾರ್ಗದಲ್ಲಿ (ಮಾದಾವರಸಿಲ್ಕ್ ಇನ್‌ಸ್ಟಿಟ್ಯೂಟ್) ಸಂಚಾರ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸುವ ಉದ್ದೇಶದಿಂದ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ. ಆರಂಭಿಕ ಹಂತದಲ್ಲಿ (ಫೇ1) ಕಾರ್ಯಾಚರಣೆಯಲ್ಲಿದ್ದ 17 ರೈಲುಗಳನ್ನು ಹಂತ ಹಂತವಾಗಿ ನೇರಳೆ ಮಾರ್ಗಕ್ಕೆ ಸ್ಥಳಾಂತರ ಮಾಡಲಾಗುತ್ತಿದ್ದು, ಹಸಿರು ಮಾರ್ಗಕ್ಕೆ ಸಂಪೂರ್ಣವಾಗಿ 21 ಹೊಸ ಆಧುನಿಕ 6–ಕೋಚ್ ಸಿಆರ್ ಆರ್ ಸಿ ರೈಲುಗಳನ್ನು ನಿಯೋಜಿಸಲು ಬಿಎಂಆರ್‌ಸಿಎಲ್ ಮುಂದಾಗಿದೆ.

33.5 ಕಿ.ಮೀ ಉದ್ದದ ಉತ್ತರ ದಕ್ಷಿಣ ಕಾರಿಡಾರ್ ಆಗಿರುವ ಹಸಿರು ಮಾರ್ಗಕ್ಕೆ ಸಂಪೂರ್ಣ ಹೊಸ ರೈಲುಗಳನ್ನು ನೀಡುವ ಮೂಲಕ ಸಂಚಾರ ಅವಧಿಯನ್ನು ಕಡಿತಗೊಳಿಸಿ, ರೈಲುಗಳ ಓಡಾಟವನ್ನು ಹೆಚ್ಚಿಸುವ ಗುರಿ ಹೊಂದಲಾಗಿದೆ. ಇದರಿಂದ ಹೆಚ್ಚಿನ ಪ್ರಯಾಣಿಕರಿಂದ ಕೂಡಿರುವ ಪೂರ್ವ ಪಶ್ಚಿಮ ಕಾರಿಡಾರ್‌ನ ನೇರಳೆ ಮಾರ್ಗಕ್ಕೂ ಹೆಚ್ಚುವರಿ ರೈಲುಗಳು ಲಭ್ಯವಾಗಲಿವೆ.

**21 ರೈಲುಗಳ ಪೂರೈಕೆ:**2019–20ರ ಒಪ್ಪಂದದಂತೆ ಡಿಟಿಜಿ (ಡಿಸೈನ್ ಟು ಗೋ) ತಂತ್ರಜ್ಞಾನದ 21 ಮೆಟ್ರೋ ರೈಲುಗಳನ್ನು ಚೀನಾದ ಸಿಆರ್‌ಆರ್‌ಸಿ ಹಾಗೂ ಭಾರತದಲ್ಲಿನ ಟಿಟಾಗಢ್ ರೈಲ್ ಸಿಸ್ಟಮ್ಸ್ ಲಿಮಿಟೆಡ್ ಪೂರೈಸಲಿದೆ. ಈ ಪೈಕಿ ಒಂದು ಪ್ರೋಟೋಟೈಪ್ ರೈಲು ಈಗಾಗಲೇ ಬೆಂಗಳೂರಿಗೆ ಆಗಮಿಸಿದ್ದು, ಹಸಿರು ಮಾರ್ಗದಲ್ಲಿ ಜಲಹಳ್ಳಿ ಮಂತ್ರಿಸ್ಕ್ವೇರ್ ಸಂಪಿಗೆ ರಸ್ತೆ ನಡುವಿನ ಭಾಗದಲ್ಲಿ ಆರ್‌ಡಿಎಸ್‌ಓ ಮೇಲ್ವಿಚಾರಣೆಯಲ್ಲಿ ರಾತ್ರಿ ವೇಳೆ ಪರೀಕ್ಷಾ ಸಂಚಾರ ನಡೆಯುತ್ತಿದೆ.

**ಪ್ರಯಾಣಿಕರಿಗೆ ಅನುಕೂಲ:**ಮುಂದಿನ ಒಂದೆರಡು ವಾರಗಳಲ್ಲಿ ತಪಾಸಣೆ ಪೂರ್ಣಗೊಂಡ ಬಳಿಕ ರೈಲ್ವೆ ಸುರಕ್ಷತಾ ಪ್ರಧಾನ ಆಯುಕ್ತಾಲಯ ಹಾಗೂ ರೈಲ್ವೆ ಮಂಡಳಿಯ ಅನುಮೋದನೆ ಪಡೆದು ಮಾರ್ಚ್ ಒಳಗಾಗಿ ವಾಣಿಜ್ಯ ಸೇವೆಗೆ ಸೇರಿಸುವ ಗುರಿ ಹೊಂದಲಾಗಿದೆ.

ಹೊಸ ರೈಲುಗಳ ಸೇರ್ಪಡೆಯಿಂದ ಸಂಚಾರ ವೇಗ ಹೆಚ್ಚಾಗಿ, ಪ್ರಯಾಣಿಕರಿಗೆ ಹೆಚ್ಚಿನ ಅನುಕೂಲ ದೊರೆಯಲಿದೆ ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದ್ದಾರೆ.

# ಕಲಿಯೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಪ್ರಥಮ ಮಹಾಸಭೆ



**ತಿ.ನರಸೀಪುರ ಡಿ.31:–** ರೈತರು ಮತ್ತು ಮಹಿಳಾ ಸ್ವ ಸಹಾಯ ಸಂಘಗಳಿಗೆ ಸ್ಥಳೀಯವಾಗಿ ಆರ್ಥಿಕ ನೆರವನ್ನು ನೀಡಲು ಕಲಿಯೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘವನ್ನು ಆರಂಭಿಸಿದ್ದೇವೆ ಎಂದು ಅಧ್ಯಕ್ಷ, ನಿವೃತ್ತ ಮುಖ್ಯ ಲೆಕ್ಕಾಧಿಕಾರಿ ಮಾಲಂಗಿ ಜೆ.ಶಿವಸ್ವಾಮಿ ಹೇಳಿದರು.

ತಾಲೂಕಿನ ಅಮ್ಮಾಜಿಕಟ್ಟೆಯಲ್ಲಿ ಭಾನುವಾರ ಆಯೋಜಿಸಿದ್ದ ಕಲಿಯೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಪ್ರಥಮ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದ ಅವರು ರೈತರ ಕೃಷಿಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ಸೌಲಭ್ಯವನ್ನು ಕಲ್ಪಿಸಬೇಕು. ಹಳ್ಳಿಗಾಡಿನ ಮಹಿಳೆಯರು ಸ್ವ ಉದ್ಯೋಗದ ಮೂಲಕ ಸ್ವಾವಲಂಬಿಗಳಾಗಲು ಆರ್ಥಿಕ ನೆರವು ನೀಡಬೇಕು ಎಂಬುದು ನೂತನ ಸಂಘದ ಧ್ಯೇಯವಾಗಿದೆ ಎಂದರು.

ಕಲಿಯೂರು ಸುತ್ತಮುತ್ತಲ ಗಡಿ ಗ್ರಮಗಳೆಲ್ಲವೂ ಕಾವೇರಿ ನದಿ ತೀರ ಮತ್ತು ನಾಲೆಗಳ ನೀರಾವರಿ ಸೌಲಭ್ಯವನ್ನು ಹೊಂದಿದ್ದರೂ ನಿರೀಕ್ಷಿತ ಮಟ್ಟದಲ್ಲಿ ಆರ್ಥಿಕ ಅಭಿವೃದ್ಧಿಯನ್ನು ಕಂಡಿಲ್ಲ. ಈ ಹಿನ್ನೆಲೆಯಲ್ಲಿ ಗಂಭೀರ ಚಿಂತನೆ ಮಾಡಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘವನ್ನು ಸರ್ಕಾರದ ಮಾರ್ಗಸೂಚಿಯಂತೆ ಆರಂಭಿಸಿದ್ದೇವೆ. ಷೇರುದಾರರ ನೋಂದಣಿಯನ್ನು ಹೆಚ್ಚಿನ ಪ್ರಮಾಣದಲ್ಲಿ ಮಾಡಿಸಲಾಗುವುದು. ನಿವೇಶನ ಸೇರಿದಂತೆ ಸ್ವಂತ ಕಟ್ಟಡವನ್ನು ನಿರ್ಮಾಣ ಮಾಡಲು ಯೋಜನೆ ರೂಪಿಸಿ, ಆಡಳಿತಾರೂಢ ಸರ್ಕಾರ, ಶಾಸಕರು, ಸಚಿವರು ಹಾಗೂ ಸಂಸದರ ನೆರವನ್ನು ಪಡೆಯಲಾಗುವುದು ಎಂದು ಮಾಲಂಗಿ ಜೆ.ಶಿವಸ್ವಾಮಿ ತಿಳಿಸಿದರು. ಹೆಮ್ಮಿಗೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಿಂದ ಪ್ರತ್ಯೇಕವಾಗಿ ಕಾರ್ಯರಂಭಿಸಿರುವ ಕಲಿಯೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಕಳೆದ ಡಿ.5 ರಂದು ಆಡಳಿತ ಮಂಡಳಿಯ ನಿರ್ದೇಶಕರ ಆಯ್ಕೆಗೆ ಹಾಗೂ ಡಿ.28 ರಂದು ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಗೂ ಚುನಾವಣೆ ನಡೆದಿತ್ತು. ಸಹಕಾರ ಸಂಘಗಳ ಬೈಲಾದಂತೆ ನೂತನ ಸಂಘದ ಪ್ರಥಮ ಮಹಾಸಭೆ ಯನ್ನು ಆಯೋಜಿಸಲಾಗಿತ್ತು. ಸಂಘದ ಉಪಾಧ್ಯಕ್ಷ ಎಂ.ಎಸ್.ನಟರಾಜಮೂರ್ತಿ, ನಿರ್ದೇಶಕರಾದ ಲೋಕೇಶ, ಕೆ. ಪ್ರಭುಸ್ವಾಮಿ, ಬಿ.ನಂಜುಂಡಸ್ವಾಮಿ, ಎಸ್.ಭಾರತಿ, ವಿಜಯಕು ಮಾರ್, ಮರಿತಾಯಮ್ಮ, ಪಿ.ಲಕ್ಷ್ಮಣ, ಸಿದ್ದಬಸವಶೆಟ್ಟಿ, ಕೃಷ್ಣ, ಪುಟ್ಟ ನಿಂಗಮ್ಮ ಹಾಗೂ ಇತರರು ಇದ್ದರು.

# ಪಟ್ಟಣದ ಬಂಗಾರ ಅಭರಣ ಮಾರಾಟಗಾರರಿಗೆ ಜಾಗೃತಿ ಮೂಡಿಸಿದ ಪೊಲೀಸ್ ಅಧಿಕಾರಿಗಳು

ಧೈರ್ಯದ ದಾರಿ



**ಮಾನ್ವಿ,ಡಿ.31:-**ಪಟ್ಟಣದಲ್ಲಿನ ವಿವಿಧ ಬಂಗಾರ ಹಾಗೂ ಬೆಳ್ಳಿಯ ಅಭರಣಗಳನ್ನು ತಯಾರಿಸುವವರ ಹಾಗೂ ಮಾರಾಟ ಮಳಿಗೆಗಳು,ಜ್ಯೂವೆಲ್ಲರಿ ಅಂಗಡಿಗಳಿಗೆ ಮಾನ್ವಿ ಪೊಲೀಸ್ ಠಾಣೆಯ ಎ.ಎಸ್.ಐ. ಶಿವಲಿಂಗಪ್ಪ ಭೇಟಿ ನೀಡಿ ಅಂಗಡಿ ಮಾಲಿಕರಿಗೆ ಸಾರ್ವಜನಿಕ ಸುರಕ್ಷತೆ ಅಧಿನಿಯಮ 2017 ಕಲಂ 6 (1) ಅಡಿಯಲ್ಲಿ ನೋಟಿಸ್ ನೀಡಿ ಮಾತನಾಡಿ ರಾಯಚೂರು ಜಿಲ್ಲಾ ಪೊಲಿಸ್ ಅಧೀಕ್ಷಕರು ಇತ್ತಿಚಿನ ದಿನಗಳಲ್ಲಿ ಜಿಲ್ಲೇಯಲ್ಲಿ ಅಭರಣ ಅಂಗಡಿಗಳಲ್ಲಿ ರಾಜಸ್ಥಾನ ಮತ್ತು ಉತ್ತರಪ್ರದೇಶದಿಂದ ಎರಡು ವಿಭಿನ್ನವಾದ ಕಳ್ಳರ ತಂಡಗಳು ಕಾರ್ಯಚಾರಿಸಿ ಅಭರಣ ಅಂಗಡಿಗಳಲ್ಲಿ ಕಳ್ಳತನ ಮಾಡುತ್ತಿರುವ ಪ್ರಕರಣಗಳು ವರದಿಯಾಗುತ್ತಿರುವ ಕುರಿತು ನೀಡಿದ ಸೂಚನೆ ನೀಡಿದ್ದು ಅದರಂತೆ ಮಾನ್ವಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಬಂಗಾರದ ಅಭರಣಗಳ ಮಾರಾಟಗಾರರು ತಮ್ಮಲಿರುವ ಕೋಟ್ಯಾಂತರ ಬೆಲೆ ಬಾಳುವ ಬಂಗಾರ,ಬೆಳ್ಳಿ ಸೇರಿದಂತೆ ಅಮೂಲ್ಯವಾದ ಅಭರಣಗಳು ಕಳ್ಳತನವಾಗದಂತೆ ಅಗತ್ಯ ಜಾಗ್ರತೆ ವಹಿಸಬೇಕು ಅಂಗಡಿಗಳಲ್ಲಿ ಅಗತ್ಯವಾದ ಭದ್ರತ ವ್ಯವಸ್ಥೆ ಮಾಡಿಕೊಳ್ಳಬೇಕು ಬಂಗಾರ ಅಂಗಡಿಯ ಒಳಗಡೆ ಮತ್ತು ಹೊರಗಡೆ ಭದ್ರತೆಗಾಗಿ ಸಿ.ಸಿ. ಟಿವಿ .ಕ್ಯಾಮೆರಾಗಳನ್ನು ಆಳವಡಿಸಿಕೊಳ್ಳಬೇಕು, ಅಂಗಡಿಯ ಬಾಗಿಲುಗಳನ್ನು ಕಬ್ಬಿಣದಿಂದ ಗಟ್ಟಿ ಮುಟ್ಟಾಗಿ ಇರುವಂತೆ ಮಾಡಿಸಬೇಕು ಅಂಗಡಿಯನ್ನು ಬಂದ್ ಮಾಡಿಕೊಂಡು ಹೋಗುವಾಗ ಭಾರಿ ಬೆಲೆಬಾಳುವ ಆಭರಣಗಳನ್ನು ಅಂಗಡಿಗಳಲ್ಲಿ ಬಿಡದೆ ಅವುಗಳನ್ನು ತಮ್ಮ ಮನೆಗಳಿಗ ತೆಗೆದುಕೊಂಡು ಹೋಗಬೇಕು, ತಮ್ಮ ಅಂಗಡಿಗಳ ಹೊರಗಡೆ ಹಾಗೂ ಒಳಗಡೆ ಅನುಮಾನಸ್ಪದ ವ್ಯಕ್ತಿಗಳು ಕಂಡು ಬಂದಲ್ಲಿ ಅವರ ಕುರಿತು ಕೂಡಲೇ ಪೊಲೀಸ್ ಠಾಣೆಗೆ ಅಥಾವ ಪೊಲೀಸ್ ಸಹಾಯವಾಣಿ ವಾಹನ ಸಂಖ್ಯೆ 112 ಕ್ಕೆ ಕರೆಮಾಡಿ ಮಾಹಿತಿ ನೀಡಬೇಕು ಎಂದು ತಿಳಿಸಿದರು.
ಮಾನ್ವಿ ಪೊಲೀಸ್ ಠಾಣೆ ವ್ಯಾಪ್ತಿಯ ವಿವಿಧ ಬಂಗಾರದ ಅಭರಣ ಮಳಿಗೆಗಳಿಗೆ ಭೇಟಿ ನೀಡಿ ಸುರಕ್ಷೆತೆಗಾಗಿ ನೋಟೀಸ್ ನೀಡಿ ಜಾಗೃತಿ ಮೂಡಿಸಿದರು.
ಪೊಲೀಸ್ ಸಿಬ್ಬಂದಿಗಳಾದ ಬಸವರಾಜ,ಚರಣರಾಜ, ರವಿಗೌಡ ಸೇರಿದಂತೆ ಇನ್ನಿತರರು ಇದ್ದರು.

## ಮೊದಲನೇ ಪುಟದಿಂದ

# ತುಂಗಭದ್ರ ನದಿಯ ನೀರು ಇಂದು ಕುಡಿಯುವುದಕ್ಕೂ ಕೂಡ ಯೋಗ್ಯವಾಗಿ ಉಳಿದಿಲ್ಲ: ಮಹಿಮಾ ಪಾಟೀಲ್

ಅಂದಿನ ಪ್ರದಾನಿ ಅಟಲ್ ಬಿಹಾರಿ ವಾಜಪೇಯಿಯವರಿಗೆ ನಮ್ಮ ಸಂಸ್ಥೆವತಿಯಿಂದ ವರದಿಯನ್ನು ನೀಡಿದರಿಂದ ನದಿಜೊಡಣೆಯನ್ನು ಬಿಟ್ಟು ಪ್ರವಾಹ ಸಮಯದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ದೊರೆಯುವ ನೀರನ್ನು ಹರಸಿಕೊಳ್ಳುವುದಕ್ಕೆ ಪೈಪಲೈನ್ ಅಳವಡಿಸುವ ಯೋಜನೆಯನ್ನು ರೂಪಿಸಲಾಯಿತು. ನಮ್ಮ ದೇಶದ ಮೂಲವೇ ಧರ್ಮವಾಗಿದ್ದು .ಧರ್ಮದ ಆದಾರದ ಮೇಲೆ ಸಮಾಜ,ಸಮಾಜದ ಅಧಾರದ ಮೇಲೆ ಸರ್ಕಾರ ನಡೆಯುತ್ತದೆ. ನಮ್ಮ ಭಾರತದ ಸಂಸ್ಕೃತಿಯಲ್ಲಿ ನದಿಗಳಿಗೆ ಮಾತೃಸ್ಥಾನವನ್ನು ನೀಡಲಾಗಿದ್ದು ಅವುಗಳನ್ನು ಮುಂದಿನ ಪಿಳಿಗೆಗೆ ಉಳಿಸಿಕೊಳ್ಳುವ ಜವಾಬ್ದರಿ ಪ್ರತಿಯೊಬ್ಬರ ಮೇಲಿದೆ ಎಂದು ತಿಳಿಸಿದರು.

ದಿವ್ಯ ಸಾನಿಧ್ಯವನ್ನು ಉಟಕನೂರು ಮಠದ ಶ್ರೀ ಮರಿಬಸವಲಿಂಗ ದೇಶಿಕೇಂದ್ರ ಮಹಾಸ್ವಾಮಿ, ಅಡವಿ ಅಮರೇಶ್ವರ ಮಠದ ಶ್ರೀ ತೊಂಟಾದಾರ್ಯ ಮಹಾಸ್ವಾಮಿಗಳು ವಹಿಸಿದರು.

ಪ್ರೊ.ಶ್ರೀಪತಿ ಐ.ಐ.ಟಿ. ಹಾಗೂ ಆರ್ಥಿಕ ಸಲಹೆಗಾರರಾದ ಪ್ರೊ.ಕುಮಾರಸ್ವಾಮಿ ನದಿಯ ಉಳಿವಿನ ಕುರಿತು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಮಾಜಿ ಸಂಸದರಾದ ಬಿ.ವಿ.ನಾಯಕ, ಮಾಜಿ ಶಾಸಕರಾದ ಬಸವನಗೌಡ ಬ್ಯಾಗವಾಟ, ರಾಜಾ ವೆಂಕಟಪ್ಪ ನಾಯಕ,ಗಂಗಾಧರನಾಯಕ, ಕೃಷಿ ಬೆಲೆ ಅಯೋಗದ ಮಾಜಿ ಅಧ್ಯಕ್ಷರಾದ ಹನುಮನಗೌಡ ಬೆಳಗುರ್ಕಿ, ಜಿಲ್ಲಾ ಸಂಚಾಲಕರಾದ ಎನ್. ಉದಯಕುಮಾರ ಸಾಹುಕಾರ,ತಾ.ಸಂಚಾಲಕರಾದ ಶ್ರೀಧರ ಸ್ವಾಮಿ, ಅನಿತಾನವಲಕಲ್,ಡಾ.ಬಸವರಾಜಪ್ಪ ಪೋತ್ನಾಳ್, ಶರಣಪ್ಪಗೌಡ ನಕ್ಕುಂದಿ, ಶಿವಕುಮಾರ ಮಾಲಿಪಾಟೀಲ್, ಸುಜಾತ,ಜಗದೀಶ ಓತ್ತೂರ್, ಸೇರಿದಂತೆ ಪೋತ್ನಾಳ್ ಗ್ರಾಮದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಗ್ರಾಮಸ್ಥಾರು,ವಿವಿಧ ಸಂಘ ಸಂಸ್ಥೆಗಳ ಮುಖಂಡರು ಭಾಗವಹಿಸಿದರು.

ಪೋತ್ನಾಳ್ ಗ್ರಾಮದಿಂದ ಹಿರೇಕೊಟ್ನಕಲ್ ವರೆಗೆ ನಡೆದ ನಿರ್ಮಾ ತುಂಗಭದ್ರ ಅಭಿಯಾನ ಜಲಜಾಗೃತಿ–ಜನಜಾಗೃತಿ ಪಾದಯಾತ್ರೆಯಲ್ಲಿ ನೂರಾರು ಜನರು ಭಾಗವಹಿಸಿದರು.

# ಉದ್ಯೋಗ ಮೇಳದ ಪೂರ್ವಭಾವಿ ಸಭೆ ಉದ್ಯೋಗ ಮೇಳ ಯಶಸ್ವಿಗೆ ಸಿದ್ಧತೆ ಮಾಡಿಕೊಳ್ಳಿ: ಶರಣಬಸವರಾಜ

ವಿಶ್ವವಿದ್ಯಾಲಯ ದಲ್ಲಿ ಜನವರಿ ತಿಂಗಳಲ್ಲಿ ನಡೆಸಲಾಗುತ್ತಿದ್ದು, ಮೇಳದಲ್ಲಿ ಎಸ್‌ಎಸ್‌ಎಲ್‌ಸಿಯಿಂದ ಮೊದಲು ಗೊಂಡು ಪಿಯುಸಿ, ಸಾಮಾನ್ಯ ಪದವಿ, ಡಿಪ್ಲೊಮಾ, ಐಟಿಐ, ಎಂಜಿನಿಯರಿಂಗ್ ಸೇರಿದಂತೆ ವಿವಿಧ ಕೋರ್ಸ್ಗಳನ್ನು ಕಲಿತವರಿಗೆ ಉದ್ಯೋಗಾವಕಾಶ ಕಲ್ಪಿಸಲು ವೇದಿಕೆ ಸಜ್ಜುಗೊಳಿಸಲಾಗಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ 75 ಉದ್ಯೋಗದಾತರು (ಕಂಪೆನಿಗಳು) ಭಾಗವಹಿಸಲಿದ್ದು, ಆಸಕ್ತ ಅಭ್ಯರ್ಥಿಗಳು ನೋಂದಣಿ ಮಾಡಿಕೊಳ್ಳಬೇಕು. ಮೇಳದಲ್ಲಿ ಆಯ್ಕೆಯಾದವರಿಗೆ ಸ್ಥಳದಲ್ಲಿಯೇ ಆಫರ್ ಲೆಟರ್ ಕೊಡಲಿದ್ದಾರೆ ಎಂದರು.ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಧಿಕಾರಿ ವಿಜಯಶಂಕರ್, ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು.ಹುದೇಡ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮಶೇಖರಪ್ಪ ಹೋಕ್ರಾಣಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಉಪ ನಿರ್ದೇಶಕರಾದ ರಾಜಕುಮಾರ್ ಪಾಟೀಲ್, ಜಿಲ್ಲಾ ಉದ್ಯೋಗಾ ಧಿಕಾರಿ ನವೀನ್ ಕುಮಾರ್, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕೆ ಸಂಘದ ಕಾರ್ಯದರ್ಶಿ ಜಂಬಣ್ಣ ಸೇರಿದಂತೆ ವಿವಿಧ ಕಾಲೇಜಿನ ಪ್ರಾಚಾರ್ಯರು, ಉಪನ್ಯಾಸಕರು ಸಭೆಯಲ್ಲಿ ಇದ್ದರು.

# ಮಾನವಿ: ಘನ ತ್ಯಾಜ್ಯ ವಿಲೇವಾರಿ ವಾಹನಕೆ ಚಾಲನೆ

ಸಾಬೀರ್ ಹುಸೇನ್, ಡಿ ವಿರೇಶ್, ಜಮೀಲ್ ಆಹೆಮದ್, ಸೈಯದ್ ನಜರುದ್ದೀನ್ ಖಾದ್ರಿ, ರೇವಣಸಿದ್ದಯ್ಯ ಸ್ವಾಮಿ, ಸುಕುಮನಿ, ಜಿಲಾನಿ ಕುರೇಶಿ, ವೆಂಕಟೇಶ್ ನಾಯಕ್, ಸತ್ತಾರ್ ಬಂಗ್ಲೆವಲೆ,ಶೇಕ್ ಮಹಿಬೂಬ್ (ಜೂಲಿ ) ರಹಮತ್ ಅಲಿ, ಚಂದ್ರು ಕಾಜಗಾರ್, ಕಾಮೇಶ್ ಮಂದಕಲ್,ಹಂಪಯ್ಯ್ ನಾಯಕ ಬೆಳಗಿನಪೇಟೆ, ರೇಣುಕಾ ರೆಡ್ಡಿ, ಕಮಲಿ ಬಾಬಾ, ಶೇರು, ಪುರಸಭೆಯ ಮುಖ್ಯ ಅಧಿಕಾರಿ ನೈರ್ಮಲ್ಯ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಶಾಲಾ ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸಿ

**ಕೋಲಾರ,ಡಿ,31–**ಅಲ್ಪ ಸಂಖ್ಯಾತರ ಸಮುದಾಯಕ್ಕಾಗಿ ಜಾರಿಗೊಳಿಸಲಾಗಿರುವ ಪ್ರಧಾನಮಂತ್ರಿ 15 ಅಂಶದ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಮುದಾಯದ ಶಿಕ್ಷಣ ಸಂಸ್ಥೆಗಳಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯಾದ ಮೂಲ ಸೌಲಭ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಬಾರದು ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರದಂದು ನಡೆದ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿ ವಿವಿಧ ಇಲಾಖೆಗಳಡಿ ಅಲ್ಪಸಂಖ್ಯಾತರಿಗಾಗಿ ಇರುವ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು ಕೂಡಲೇ ಸಾಧಿಸುವಂತೆ ನಿರ್ದೇಶನ ನೀಡಿದರು.

ಶೈಕ್ಷಣಿಕ ಸೌಲಭ್ಯ ಕಲ್ಪಿಸುವುದು, ತಂತ್ರಜ್ಞಾನ ತರಬೇತಿ ಮೂಲಕ ಕೌಶಲ್ಯ ಕಾರ್ಯಕ್ರಮ ತಲುಪಿಸುವುದು, ಆರ್ಥಿಕ ಚಟುವಟಿಕೆ ಬಲಪಡಿಸಲು ಸಾಲ ಸೌಲಭ್ಯ ಕಲ್ಪಿಸುವುದು. ನಾಗರಿಕ ಸೇವೆಗಳ ಬಗ್ಗೆ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳುವುದು, ಅಲ್ಪಸಂಖ್ಯಾತರ ಜೀವನ ಮಟ್ಟ ಸುಧಾರಿಸಲು ವಸತಿ ಯೋಜನೆ ಕಲ್ಪಿಸುವುದು, ಸರಳ ವಿವಾಹ ಯೋಜನೆ ಹೀಗೆ ಹಲವು ಕಾರ್ಯಕ್ರಮಗಳನ್ನು ಅಲ್ಪಸಂಖ್ಯಾತರಿಗೆ ತಲುಪಿಸುವಂತೆ ನಿರ್ದೇಶನ ನೀಡಿದರು.


ಸರ್ಕಾರವು ಅಲ್ಪಸಂಖ್ಯಾತರ ಅಭಿವೃದ್ಧಿಗೆ ಸರ್ಕಾರವು ಅನೇಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿಗೆ ತರುತಿದ್ದು ಅಧಿಕಾರಿಗಳು ಅದನ್ನು ಸಂಬಂಧಪಟ್ಟ ಸಮುದಾಯದ ಜನರಿಗೆ ತಲುಪಿಸುವ ಕೆಲಸವನ್ನು ಮಾಡಬೇಕಾಗಿದೆ. ಈ ಕುರಿತು ಸಮಿತಿಯನ್ನು ರಚಿಸಿದ್ದು ಅವರೊಂದಿಗೂ ಜೊತೆಗೂಡಿ ಅಧಿಕಾರಿಗಳು ಯೋಜನೆಗಳನ್ನು ಅನುಷ್ಠಾನ ಗೊಳಿಸಬೇಕು ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನಾರಾಯಣಸ್ವಾಮಿ ಮಾಹಿತಿ ನೀಡಿ 197 ಅಂಗನವಾಡಿ ಕೇಂದ್ರಗಳಿದ್ದು ಇಲಾಖೆಯಿಂದ ಪೂರಕ ಪೌಷ್ಠಿಕ ಆಹಾರ ಕಲ್ಪಿಸುವುದು ಸೇರಿದಂತೆ ಭಾಗ್ಯಲಕ್ಷ್ಮಿ, ಗೃಹಲಕ್ಷ್ಮಿ,ಪ್ರಧಾನಮಂತ್ರಿ ಅವರ ಮಾತೃವಂದನಾ ಯೋಜನೆ ಸೇರಿದಂತೆ ಹಲವು ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಹೇಳಿದರು.

ತೋಟಗಾರಿಕೆ ಇಲಾಖೆ ಅಧಿಕಾರಿ ಮಾತನಾಡಿ ಇಲಾಖೆಯಿಂದ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ, ರಾಷ್ಟ್ರೀಯ ತೋಟಗಾರಿಕಾ ಮಿಷನ್ ಯೋಜನೆ, ಹನಿ ನೀರಾವರಿ ಯೋಜನೆ, ಜೇನು ಸಾಕಾಣಿಕೆ, ಅನುಷ್ಠಾನ ಸಹಾಯಧನ ಹೀಗೆ ಹಲವು ಯೋಜನೆ ತಲುಪಿಸಲಾಗುತ್ತಿದೆ ಎಂದರು.

ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧಿಕಾರಿ ಶಿರಿನ್ ತಾಜ್ ಮಾಹಿತಿ ನೀಡಿ ಶ್ರಮಶಕ್ತಿ, ಸ್ವಾವಲಂಬಿ ಸಾರಥಿ, ವೃತ್ತಿ ಪ್ರೋತ್ಸಾಹ, ಅರಿವು, ವಿದೇಶಿ ವಿದ್ಯಾಭ್ಯಾಸ, ನೇರಸಾಲ ಯೋಜನೆ, ಉನ್ನತ ಶಿಕ್ಷಣಕ್ಕೆ ಸಾಲ ಯೋಜನೆ ಹೀಗೆ ಹಲವು ಯೋಜನೆ ತಲುಪಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮೂಲಕ 3 ಮುರಾರ್ಜಿ ದೇಸಾಯಿ ವಸತಿ ಶಾಲೆಗಳು , 8 ಮೌಲನಾ ಆಜಾದ್ ವಸತಿ ಶಾಲೆಗಳ ಅಭಿವೃದ್ಧಿ ಸಂಬಂಧಿಸಿದಂತೆ ಮಾತನಾಡಿ ವಿದ್ಯಾರ್ಥಿಗಳ ದಾಖಲಾತಿಗಳ ಬಗ್ಗೆ ಅಧಿಕಾರಿಗಳು ಮಾಹಿತಿ ನೀಡಿದರು.



ಉರ್ದು ಶಾಲೆಗಳಲ್ಲಿನ ಅವ್ಯವಸ್ಥೆಗಳನ್ನು ಸುಧಾರಿಸುವಂತೆ ಜಿಲ್ಲಾಧಿಕಾರಿಗಳು ಡಿಡಿಪಿಐ ಅವರಿಗೆ ಸೂಚನೆ ನೀಡಿದರು. ಇಲಾಖೆಯ ಅಧಿಕಾರಿಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರ ಇಲ್ಲವಾ ಎಂಬುದನ್ನು ಸಮಿತಿಯ ಸದಸ್ಯರು ಗಮನವಹಿಸಬೇಕು ಎಂದು ತಿಳಿಸಿದರು.

ರಾಜೀವ್ ಗಾಂಧಿ ವಸತಿ ಯೋಜನೆ ಅಡಿಯಲ್ಲಿ 5.5 ಕೋಟಿ ರೂಪಾಯಿ ಕಾಮಗಾರಿ ನಡೆಯುತ್ತಿದ್ದು ಶೀಘ್ರದಲ್ಲಿಯೇ ಪೂರ್ಣಗೊಳಿಸಿ ಹಸ್ತಾಂತರ ಮಾಡಲಾಗುವುದು ಎಂದು ಅಧಿಕಾರಿಗಳು ತಿಳಿಸಿದರು.

ಸ್ಥಳೀಯ ಪಟ್ಟಣ ಪಂಚಾಯಿತಿ, ಪುರಸಭೆ ಹಾಗೂ ನಗರಸಭೆ ವ್ಯಾಪ್ತಿಯಲ್ಲಿ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸಕ್ಕೆ ಸಹಾಯಧನ ನೀಡಲಾಗಿದೆ, ಶಸ್ತ್ರ ಚಿಕಿತ್ಸೆಗೆ ಸಹಾಯಧನ, ವೈದ್ಯಕೀಯ ಧನ,ಲಘು ವಾಹನ ಚಾಲನಾ ತರಬೇತಿ, ಇತರೆ ಅವಕಾಶಗಳನ್ನು ಕಲ್ಪಿಸಲಾಗುತ್ತಿದೆ. ಅಲ್ಪಸಂಖ್ಯಾತರಿಗೆ ಮೀಸಲು ಇಟ್ಟಿರುವಂತಹ ಅನುದಾನವನ್ನು ಅವರಿಗೆ ಮಾತ್ರ ಪೂರ್ಣ ಬಳಕೆಯಲ್ಲಿ ಬಳಕೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಪ್ರಧಾನಮಂತ್ರಿಗಳ ಉದ್ಯೋಗ ಸೃಜನಾ ಕಾರ್ಯಕ್ರಮದಡಿ 15 ಜನರಿಗೆ ಸಾಲ ಮಂಜೂರು ಮಾಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು

ವಕ್ಫ್ ಮಂಡಳಿ ಕಚೇರಿಯನ್ನು ಕೋಲಾರ ನಗರದ ಕ್ಲಾಕ್ ಟವರ್ ಬಳಿಗೆ ಸ್ಥಳಾಂತರ ಮಾಡಬೇಕು ಎಂದು ಸಮಿತಿಯ ಸದಸ್ಯರು ಮನವಿ ಮಾಡಿದಾಗ ಜಿಲ್ಲಾಧಿಕಾರಿಗಳು ಶೀಘ್ರದಲ್ಲಿಯೇ ತಮ್ಮ ವಕ್ಫ್ ಮಂಡಳಿತ ಕಚೇರಿಯನ್ನು ನವೀಕರಣಗೊಳಿಸಿ ಅಲ್ಪ ಸಂಖ್ಯಾತರ ಮಾಹಿತಿ ಕೇಂದ್ರವನ್ನು ಅಲ್ಲೇ ಪ್ರಾರಂಭ ಮಾಡುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್. ಪಿ. ಬಾಗೇವಾಡಿ, ಅಲ್ಪಸಂಖ್ಯಾತರ ಇಲಾಖೆ ಅಧಿಕಾರಿ, ಮೈಲಾರಪ್ಪ, ಸಮಿತಿಯ ಸದಸ್ಯರಾದ ಶಫೀಕ್ ಅಹಮ್ಮದ್, ಇನಾಯತ್ ಉಲ್ಲಾ ಷರೀಫ್, ಇಂದಿರಾಮತಿ, ಶಭೀರ್ ಅಹ್ಮದ್, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಹೊಸ ವರ್ಷದಲ್ಲಿ ಜಿಡಿಪಿ ವೃದ್ಧಿ ನಿರೀಕ್ಷೆ

**ನವದೆಹಲಿ,ಡಿ.31–**ಭಾರತದ ಆರ್ಥಿಕತೆಯು ಪ್ರಸಕ್ತ ಹಣಕಾಸು ವರ್ಷ 2025–26 ರಲ್ಲಿ ವೇಗವಾಗಿ ಬೆಳೆಯುವ ನಿರೀಕ್ಷೆಯಿದೆ. ಐಸಿಆರ್ಎ ಲಿಮಿಟೆಡ್ ಮಂಗಳವಾರ ಬಿಡುಗಡೆ ಮಾಡಿದ ವರದಿಯ ಪ್ರಕಾರ, ಈ ವರ್ಷ ದೇಶದ ಜಿಡಿಪಿ ಬೆಳವಣಿಗೆ ಶೇಕಡಾ 7.4 ರಷ್ಟಾಗುವ ನಿರೀಕ್ಷೆಯಿದೆ, ಇದು ಕಳೆದ ವರ್ಷದ ಅಂದಾಜಿನ ಶೇಕಡಾ 6.5 ಕ್ಕಿಂತ ಹೆಚ್ಚಾಗಿದೆ. ಹಣಕಾಸು ವರ್ಷದ ಮೊದಲ ಆರು ತಿಂಗಳಲ್ಲಿ ಆರ್ಥಿಕ ಬೆಳವಣಿಗೆ ಬಲವಾಗಿ ಉಳಿಯಬಹುದು ಮತ್ತು ಈ ಅವಧಿಯಲ್ಲಿ ಜಿಡಿಪಿ ಬೆಳವಣಿಗೆ ಶೇಕಡಾ 8 ರಷ್ಟನ್ನು ತಲುಪಬಹುದು ಎಂದು ವರದಿ ಹೇಳುತ್ತದೆ.

ಆದರೆ, ವರ್ಷದ ದ್ವಿತೀಯಾರ್ಧದಲ್ಲಿ ಬೆಳವಣಿಗೆ ಸ್ವಲ್ಪ ನಿಧಾನವಾಗಬಹುದು ಮತ್ತು ಶೇಕಡಾ 7 ಕ್ಕಿಂತ ಕಡಿಮೆಯಾಗಬಹುದು. ವರದಿಯು ಬಾಹ್ಯ ಸವಾಲುಗಳನ್ನು, ವಿಶೇಷವಾಗಿ ದುರ್ಬಲ ರಫ್ತುಗಳನ್ನು ಎತ್ತಿ ತೋರಿಸುತ್ತದೆ, ಇದು ಯುಎಸ್ ಜೊತೆ ವ್ಯಾಪಾರ ಒಪ್ಪಂದವನ್ನು ತಲುಪದ ಹೊರತು ಆರ್ಥಿಕತೆಯ ಮೇಲೆ ಮತ್ತಷ್ಟು ಒತ್ತಡ ಹೇರಬಹುದು. ಐಸಿಆರ್ಎ ಪ್ರಕಾರ, 2026 ರ ಹಣಕಾಸು ವರ್ಷದ ಮೂರನೇ ತ್ರೈಮಾಸಿಕದಲ್ಲಿ




ಆರ್ಥಿಕ ಚಟುವಟಿಕೆ ಸಕಾರಾತ್ಮಕವಾಗಿಯೇ ಉಳಿದಿದೆ. ಹಬ್ಬದ ಋತುವಿನಲ್ಲಿ ಹೆಚ್ಚಿದ ಬೇಡಿಕೆ ಮತ್ತು ಜಿಎಸ್ಟಿ ದರಗಳಲ್ಲಿನ ಕಡಿತವು ಗ್ರಾಹಕರ ಖರೀದಿಗಳನ್ನು ಉತ್ತೇಜಿಸಿದೆ.

ಗಣಿಗಾರಿಕೆ, ನಿರ್ಮಾಣ ಮತ್ತು ವಿದ್ಯುತ್ ಕ್ಷೇತ್ರಗಳಲ್ಲಿ ಬೇಡಿಕೆ ಮುಂಬರುವ ತಿಂಗಳುಗಳಲ್ಲಿ ಹೆಚ್ಚಾಗುವ ನಿರೀಕ್ಷೆಯಿದೆ. ಆರಂಭದಲ್ಲಿ ಮಳೆಯಿಂದಾಗಿ ಸ್ವಲ್ಪ ಅಡಚಣೆ ಉಂಟಾದರೂ, ಈಗ ಪರಿಸ್ಥಿತಿ ಸುಧಾರಿಸುವ ನಿರೀಕ್ಷೆಯಿದೆ. ರಫ್ತು ಕುಸಿತವು ವರ್ಷದ ದ್ವಿತೀಯಾರ್ಧದಲ್ಲಿ ಹೆಚ್ಚಾಗಬಹುದು, ಇದು ಆರ್ಥಿಕ ಬೆಳವಣಿಗೆಯ ಮೇಲೆ ಮತ್ತಷ್ಟು ಪರಿಣಾಮ ಬೀರುತ್ತದೆ.

ಕಡಿಮೆ ಹಣದುಬ್ಬರ ಮತ್ತು ಉತ್ತಮ ಮಾನ್ಸೂನ್ ಮಳೆಯು ಕೃಷಿ ವಲಯಕ್ಕೆ ಪ್ರಯೋಜನವನ್ನು ನೀಡಿತು. ಆದಾಗ್ಯೂ, ಬಾಹ್ಯ ಕಳವಳಗಳು ಉಳಿದಿವೆ ಮತ್ತು ಯುನೈಟೆಡ್ ಸ್ಟೇಟ್ಸ್‌ನೊಂದಿಗೆ ವ್ಯಾಪಾರ ಒಪ್ಪಂದವನ್ನು ಶೀಘ್ರದಲ್ಲೇ ತಲುಪದಿದ್ದರೆ, ಅದು ಭವಿಷ್ಯದ ಬೆಳವಣಿಗೆಯ ಮೇಲೆ ಪರಿಣಾಮ ಬೀರಬಹುದು ಎಂದು ಅವರು ಎಚ್ಚರಿಸಿದರು. ಭಾರತದ ಆರ್ಥಿಕತೆಯು ಪ್ರಸ್ತುತ ಬಲಿಷ್ಠ ಸ್ಥಿತಿಯಲ್ಲಿದೆ ಎಂದು ಈ ವರದಿಯು ಸ್ಪಷ್ಟವಾಗಿ ತೋರಿಸುತ್ತದೆ, ಆದರೆ ಜಾಗತಿಕ ಆರ್ಥಿಕ ಪರಿಸ್ಥಿತಿಗಳು ಮತ್ತು ರಫ್ತು ಸವಾಲುಗಳ ಮೇಲೆ ನಿಯಂತ್ರಣವನ್ನು ಕಾಯ್ದುಕೊಳ್ಳುವುದು ಅತ್ಯಗತ್ಯ. ಆರ್ಥಿಕ ನೀತಿಯಲ್ಲಿ ನಿರಂತರ ಸುಧಾರಣೆಗಳು ಮತ್ತು ದೇಶೀಯ ಬೇಡಿಕೆಯನ್ನು ಹೆಚ್ಚಿಸುವ ಕ್ರಮಗಳ ಮೂಲಕ ಮಾತ್ರ ನಾವು 2026 ರಲ್ಲಿ ಸ್ಥಿರ ಮತ್ತು ಸಮತೋಲಿತ ಬೆಳವಣಿಗೆಯನ್ನು ನಿರೀಕ್ಷಿಸಬಹುದು ಎನ್ನಲಾಗಿದೆ.

# ಪೂರ್ವಿಕರ ಪದ್ಧತಿ ಅಳವಡಿಸಿಕೊಳ್ಳಿ



**ಕೆ.ಆರ್.ಪೇಟೆ.ಡಿ.31:** ಸಮಾಜದ ಸ್ವಾಸ್ಥ್ಯವನ್ನು ಕಾಪಾಡಲು ಆಧುನಿಕ ಔಷಧಿಗಳನ್ನು ತ್ಯಜಿಸಿ ನಮ್ಮ ಪೂರ್ವಿಕರ ಪದ್ಧತಿಯಲ್ಲಿದ್ದ ಹಲವು ವಿಧಾನಗಳನ್ನು ಮತ್ತೊಮ್ಮೆ ಅನುಸರಿಸುವ ಬಗೆಗೆ ಜಾಗೃತಿ ಮೂಡಿಸಲು ಎಲ್ಲರೂ ಪಣತೊಡಬೇಕಿದೆ ಎಂದು ಕೆಂಗೇರಿ ವಿಶ್ವ ಒಕ್ಕಲಿಗರ ಮಠದ ಜಗದ್ಗುರು ಶ್ರೀ ಶ್ರೀ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ ಹೇಳಿದರು.

ಅವರು ತಾಲೂಕಿನ ಸಂತೆಬಾಚಹಳ್ಳಿ ಹೋಬಳಿ ಬೆಡದಹಳ್ಳಿ ಪಂಚಭೂತೇಶ್ವರ ಮಠದಲ್ಲಿ ಪ್ರಗತಿ ಸೇವಾ ಟ್ರಸ್ಟ್ನ ಸಹಯೋಗದೊದಿಗೆ ಆಯೋಜಿಸಿದ್ದ ಮೈಸೂರಿನ ಸ್ಪಂದನಾ ಫೌಂಡೇಷನ ಉದ್ಘಾಟನೆ ಹಾಗೂ ಸಾಧಕರಿಗೆ ಕಾಯಕಯೋಗಿ ಪ್ರಶಸ್ತಿ ನೀಡಿಕೆಯು ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ವಿಷಮುಕ್ತ ಆಹಾರವನ್ನು ಸೇವಿಸುತ್ತಿರುವುದರಿಂದ ಜನರು ನೆಮ್ಮದಿಯನ್ನು ಕಳೆದುಕೊಳ್ಳುತ್ತಿದ್ದಾರೆ. ಹಿಂದೆ ಜನರು ಕೃಷಿ ಮಾಡಲು ಜಮೀನುಗಳಿಗೆ ತೆರಳುತ್ತಿದ್ದರು. ಆದರೆ ಈಗ ಆಸ್ಪತ್ರೆಗಳಿಗೆ ಎಡತಾಕುತ್ತಿದ್ದಾರೆ. ಎಲ್ಲಾ ಆಸ್ಪತ್ರೆಗಳು ಕೂಡಾ ತುಂಬಿ ತುಳುಕುತ್ತಿವೆ. ನಮ್ಮ ಪೂರ್ವಿಕರು ಪ್ರತಿ ಮನೆಯಲ್ಲಿಯು ಕೂಡಾ ಗೋವುಗಳನ್ನು ಸಾಕುತ್ತಿದ್ದರು. ಗೋವುಗಳಿಂದ ಉತ್ಪತ್ತಿಯಾಗುವ ಯಾವುದೆ ವಸ್ತುಗಳನ್ನು ಕೂಡಾ ವ್ಯರ್ಥಮಾಡುತ್ತಿರಲಿಲ್ಲ. ಗಂಜಲವನ್ನು ಶೇಖರಿಸಿ ಜಮೀನುಗಳಿಗೆ ಹಾಕುತ್ತಿದ್ದರು. ಇದು ಗಂಜಲವಲ್ಲ ಗಂಗಾಜಲ ಎಂಬ ಅರಿವು ನಮ್ಮವರಿಗಿತ್ತು. ಆದರೆ ಇಂದೇನಾಗಿದೆ? ನಾವೆಲ್ಲರೂ ವಾಣಿಜ್ಯ ದೃಷ್ಠಿಯಿಂದ ಹಸುಗಳನ್ನು ಸಾಕಿ ಹೆಚ್ಚು ಹಾಲನ್ನು ಕರೆದು ಹಸುಗಳಿಗೂ ವಿಷವನ್ನು ಉಣಿಸುತ್ತಿದ್ದೇವೆ. ಹಾಲನ್ನು ಕೂಡಾ ಕುಡಿಯದ ಪರಿಸ್ಥಿತಿಗೆ ನಾವೆಲ್ಲರೂ ಬಂದಿದ್ದೇವೆ ಎಂದು ಸ್ವಾಮೀಜಿ ವಿಷಾಧ ವ್ಯಕ್ತಪಡಿಸಿದರು.

ಇಂದು ಪ್ರತಿಯೊಬ್ಬರು ಕೂಡಾ ವೇಗದ ಬದುಕಿಗೆ ಹೊಂದಿಕೊಂಡು ರೋಗರುಜಿನಗಳನ್ನು ಬರಮಾಡಿಕೊಳ್ಳುತ್ತಿದ್ದೇವೆ. ಮನುಷ್ಯನ ವಯಸ್ಸು ಹಿಂದೆ ಸರಾಸರಿ 80 ವರ್ಷವಿತ್ತು. ಆದರೆ ಈಗ ಬದಲಾದ ಕಾಲದಲ್ಲಿ ವಯಸ್ಸಾದವರೆ ಸಿಗುತ್ತಿಲ್ಲ. ಇದರಿಂದ ಹೊರಬರಬೇಕಾದರೆ ನಮ್ಮ ಪೂರ್ವಿಕರ ಬದುಕನ್ನು ಮತ್ತೊಮ್ಮೆ ಅವಲೋಕಿಸಿ ಅನುಸರಿಸಬೇಕಿದೆ.

# ಸಹೃದಯಿ ಭಾರತ ನಿರ್ಮಾಣ ನಾರಾಯಣ ಗುರುಗಳ ಗುರಿಯಾಗಿತ್ತು: ಸಿಎಂ




**ಕೇರಳದ ಶಿವಗಿರಿ ಮಠಕ್ಕೆ ಭೇಟಿ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬ್ರಹ್ಮಶ್ರೀ ನಾರಾಯಣ ಗುರುಗಳ ಸಮಾಧಿಗೆ ಗೌರವ ಸಲ್ಲಿಸಿದರು. ಮಠಾಧೀಶರಾದ ಬ್ರಹ್ಮಶ್ರೀ ಸಚ್ಚಿದಾನಂದ ಸ್ವಾಮೀಜಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ, ಉನ್ನತ ಶಿಕ್ಷಣ ಸಚಿವ ಡಾ. ಸುಧಾಕರ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಕಾನೂನು ಸಲಹೆಗಾರ ಪೊನ್ನಣ್ಣ, ವಿಧಾನ ಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್ ಹಾಜರಿದ್ದರು. ಇದೇ ವೇಳೆ ಮುಖ್ಯಮಂತ್ರಿಗಳು ಕೇರಳ ರಾಜ್ಯದ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರನ್ನು ವೇದಿಕೆಯಲ್ಲಿ ಭೇಟಿಯಾಗಿ, ಕುಶಲೋಪರಿ ವಿಚಾರಿಸಿದರು.**

**ತಿರುವನಂತಪುರ. ಡಿ.31–** ವೈವಿಧ್ಯತೆಯ ನಡುವೆ ಮನುಷ್ಯರು ಒಗ್ಗಟ್ಟಾಗಿ ಬಾಳುವ ಸಹೃದಯಿ ಭಾರತ ನಿರ್ಮಾಣ ನಾರಾಯಣ ಗುರುಗಳ ಗುರಿಯಾಗಿತ್ತು.

ನೈತಿಕತೆ ಇಲ್ಲದ ಅಹಂಕಾರದ ಭಾಷೆಯಲ್ಲಿ ಕೋಮುವಾದ ಮಾತಾಡುವ ಬಗ್ಗೆ ನಾರಾಯಣ ಗುರುಗಳು ಎಚ್ಚರಿಸಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿಪ್ರಾಯಪಟ್ಟರು.

ಕೇರಳ ತಿರುವನಂತಪುರದ 93ನೇ ಶಿವಗಿರಿ ತೀರ್ಥಯಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿ ನಾರಾಯಣ ಗುರುಗಳು ಕೇವಲ ಒಬ್ಬ ಸಂತ ಮಾತ್ರ ಆಗಿರಲಿಲ್ಲ. ಸಮಾನತೆ ಮತ್ತು ನೈತಿಕತೆಯ ಚಳವಳಿಯಾಗಿದ್ದರು. ಹೀಗಾಗಿ ಶಿವಗಿರಿ ತೀರ್ಥಯಾತ್ರೆ ಕೂಡ ಚಳವಳಿಯ ಸ್ವರೂಪ ಪಡೆದು ಜಾತಿ ದೌರ್ಜನ್ಯ ಅಳಿಸಿ ಸಮಾಜವನ್ನು ಸಾಮಾಜಿಕ ನ್ಯಾಯದ ಕಡೆ ಮುನ್ನಡೆಸಬೇಕು ಎಂದರು.

ಇದೇ ನಾರಾಯಣ ಗುರುಗಳು ಕಂಡ ಭಾರತ. ಇದೇ ಶಿವಗಿರಿ ಪ್ರತಿಪಾದಿಸುವ ಭಾರತ. ಇಂಥಾ ಭಾರತವನ್ನು ನಾವು ಒಟ್ಟಾಗಿ ಗಟ್ಟಿಗೊಳಿಸಬೇಕಿದೆ ಎಂದರು.

ಶಿವಗಿರಿ ಮಠವು ಕೇವಲ ಒಂದು ಯಾತ್ರಾ ಕೇಂದ್ರವಾಗಿರದೇ, ಭಾರತದ ಆತ್ಮಸಾಕ್ಷಿಯ ನೈತಿಕ ವಿಶ್ವವಿದ್ಯಾಲಯವಾಗಿದೆ. ಈ ಪವಿತ್ರ ಕ್ಷೇತ್ರದಲ್ಲಿ ನಿಮ್ಮ ಮುಂದೆ ನಿಂತಿರುವುದು ನನ್ನ ಸೌಭಾಗ್ಯ. ಇದು ಬೌದ್ಧಿಕ ಮತ್ತು ವಿಶ್ವದ ಮಾನವಕುಲದ ಚಳವಳಿಯಾಗಿದೆ. ಇದು ಭೌಗೋಳಿಕವಲ್ಲ, ನೈತಿಕತೆಯ ಪ್ರವಾಸ ಎಂದು ಮೆಚ್ಚುಗೆ ಸೂಚಿಸಿದರು.

ರಾಜಕಾರಣ ನೈತಿಕತೆಯಿಂದ ದೂರವಾಗುತ್ತಾ, ಧರ್ಮವು ನೈತಿಕತೆಗಿಂತ ಹೆಚ್ಚಾಗಿ ಅಧಿಕಾರಕ್ಕಾಗಿ ಆಯುಧವಾಗುತ್ತಿರುವ ಅಪಾಯದ ದಿನಗಳಲ್ಲಿ ಶಿವಗಿರಿ ಒಂದು ನೈತಿಕ ಚಳವಳಿಯಾಗಿ ನಮಗೆ ಆದರ್ಶವಾಗಬೇಕು. ಶಿವಗಿರಿ ಮಠ 'ಜೀವಂತ ಸಂವಿಧಾನ'ದಂತೆ ಕಾರ್ಯನಿರ್ವಹಿಸುತ್ತಿದೆ ಎಂದರು.

ಶಿವಗಿರಿ ತೀರ್ಥಯಾತ್ರೆಯು ಭಾರತದ ಮೂಲ 'ಕೋಮು–ವಿರೋಧಿ' ಯೋಜನೆಯಾಗಿದೆ. ಸಮಾಜವು ಕೃತಕವಾಗಿ ಸೃಷ್ಟಿಸಲ್ಪಟ್ಟ ದ್ವೇಷದಿಂದ ಧ್ರುವೀಕರಣಗೊಳ್ಳುತ್ತಿರುವಾಗ, ಶಿವಗಿರಿಯು ಪ್ರಾಬಲ್ಯಕ್ಕಿಂತ 'ಸಂವಾದ'ವನ್ನು, ಶ್ರೇಣೀಕೃತ ವ್ಯವಸ್ಥೆಗಿಂತ 'ಸಮಾನತೆ'ಯನ್ನು ಮತ್ತು ಸಾಂಕೇತಿಕತೆಗಿಂತ 'ನೈತಿಕತೆ'ಯನ್ನು ಎತ್ತಿ ಹಿಡಿಯುತ್ತದೆ ಎಂದರು.

"ಆಧುನಿಕ ರಾಷ್ಟ್ರ ನಿರ್ಮಾಣದಲ್ಲಿ ಶಿವಗಿರಿ ತೀರ್ಥಯಾತ್ರೆಯ ಪಾತ್ರ" ಎನ್ನುವುದು ಕೇವಲ ಸಾಂಕೇತಿಕವಲ್ಲ. ಇದು ಇಂದಿನ ತುರ್ತು ಅಗತ್ಯ ಮತ್ತು ನಮ್ಮ ಕಾಲದ ಬಿಕ್ಕಟ್ಟುಗಳಿಗೆ ನೇರ ಉತ್ತರ. ಇದರ ಹಿಂದಿರುವ ಶಕ್ತಿ ಶ್ರೀ ನಾರಾಯಣ ಗುರುಗಳು ಕೇವಲ ಒಬ್ಬ ಸಂತನಲ್ಲ, ಬದಲಾಗಿ ಭಾರತದ ಶ್ರೇಷ್ಠ ಸಾಮಾಜಿಕ ದಾರ್ಶನಿಕರಲ್ಲಿ ಒಬ್ಬರು.

ನಾರಾಯಣ ಗುರುಗಳು ಅನ್ಯಾಯದ ಚೌಕಟ್ಟಿನೊಳಗೆ ಸುಧಾರಣೆಯನ್ನು ಬಯಸಲಿಲ್ಲ. ಅವರು ಅನ್ಯಾಯದ ಬೇರುಗಳನ್ನೇ ಕಿತ್ತೆಸೆದರು.

ಕೇರಳವು ಜಾತಿ ತಾರತಮ್ಯ, ಮೌಢ್ಯಾಚರಣೆ ಮತ್ತು ಅಸಮಾನತೆಯಿಂದ ಉಸಿರುಗಟ್ಟುತ್ತಿದ್ದಾಗ, "ಮಾನವಕುಲಕ್ಕೆ ಒಂದೇ ಜಾತಿ, ಒಂದೇ ಧರ್ಮ, ಒಬ್ಬನೇ ದೇವರು" ಎಂಬ ಸತ್ಯವನ್ನು ಘೋಷಿಸಿದರು.

ಇದು ಕೇವಲ ಕಾವ್ಯಾತ್ಮಕ ಹೇಳಿಕೆಯಲ್ಲ.

# ಇಂದು ಭೀಮ ಕೋರೆಗಾಂವ್ ವಿಜಯೋತ್ಸವ ಯಾತ್ರೆ




**ಪಿರಿಯಾಪಟ್ಟಣ:ಡಿ.31:–** ಶತಮಾನಗಳ ಸಿಟ್ಟನ್ನು ಸಿಡಿಮದ್ದಾಗಿಸಿಕೊಂಡು ಸಿದ್ದು ನಾಕಾ ನೇತೃತ್ವದಲ್ಲಿ ಯುದ್ಧ ಗೆದ್ದ ಭೀಮಾ ಕೋರೆಗಾಂವ್ ಯುದ್ಧವೀರರನ್ನು ನೆನೆಯುವುದಕ್ಕಾಗಿ ಇಂದು ಪಟ್ಟಣದ ಡಿ.ದೇವರಾಜು ಅರಸು ಕಲಾ ಭವನದಲ್ಲಿ ಭೀಮ ಕೋರೆಗಾಂವ್ ವಿಜಯೋತ್ಸವ ಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ದಸಂಸ ಮುಖಂಡ ಹಾಗೂ ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷ ಐಲಾಪುರ ರಾಮು ತಿಳಿಸಿದರು.

ಮಂಗಳವಾರ ಪಟ್ಟಣದ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶತ ಶತಮಾನಗಳ ಸಿಟ್ಟನ್ನು ಸಿಡಿಮದ್ದಾಗಿಸಿಕೊಂಡು ಸಿದ್ದುನಾಕಾ ನೇತೃತ್ವದಲ್ಲಿ ಯುದ್ಧ ಗೆದ್ದ ಭೀಮ ಕೋರೆಗಾಂವ್ ಯುದ್ಧವೀರರನ್ನು ನೆನೆಯದೆ ಹೋದರೆ ಚರಿತ್ರೆ ಕ್ಷಮಿಸದು. ಜಾತಿ ಅಸ್ಪೃಶ್ಯತೆ ದಮನ ದಬ್ಬಾಳಿಕೆಯಿಂದ ಕುದಿಯುತ್ತಿದ್ದ ಮಹಾರರು, ಮರಾಠವಾಡದ ಬ್ರಾಹ್ಮಣ ವಾದಿ ಪೇಶ್ವೆಗಳನ್ನು ಮಣ್ಣು ಮುಕ್ಕಿಸಿ ಅಧಿಕಾರದಿಂದ ತೊಲಗಿಸಿದ ವಿರೋಚಿತ ಇತಿಹಾಸವಿದೆ. ಜಾತಿವಾದ, ಅಸ್ಪೃಶ್ಯತೆ ಹಾಗೂ ಸಕಲ ತಾರತಮ್ಯಗಳ ವಿರುದ್ಧ ನಡೆದ ಯುದ್ಧವಾಗಿದೆ. ಈ ಯುದ್ಧದಿಂದ ಮತ್ತು ಇದರ ವಿಜಯದಿಂದ ಈ ನಾಡಿನ ದಲಿತರು ವರ್ತಮಾನದ ಜಾತಿ ವಿನಾಶ, ವರ್ಗವಿನಾಶ, ಸರ್ವ ತಾರತಮ್ಯ ವಿನಾಶಗಳ ಹೋರಾಟಕ್ಕೆ ಮಹಾನ್ ಪ್ರೇರಣೆ ಪಡೆಯಬೇಕಾಗಿದೆ ಆದ್ದರಿಂದ ಈ ಭೀಮಾ ಕೊರೆಂಗಾವ್ ಯುದ್ಧವನ್ನು ಗೆದ್ದ ಸಂಭ್ರಮವನ್ನು ಸವಿಯಲು ಪಟ್ಟಣದ ಡಿ.ದೇವರಾಜು ಅರಸು ಕಲಾ ಭವನದಲ್ಲಿ ಭೀಮಾ ಕೊರೆಂಗಾವ್ ಸ್ವಾಭಿಮಾನಿ ಜಾಗೃತಿ ಯಾತ್ರೆ ಹಮ್ಮಿಕೊಳ್ಳಲಾಗಿದ್ದು ಈ ಕಾರ್ಯಕ್ರಮಕ್ಕೆ ಅಕ್ಕ ಐಎಎಸ್ ಅಕಾಡೆಮಿಯ ನಿರ್ದೇಶಕರಾದ ಡಾ.ಶಿವಕುಮಾರ್ ಇವರೊಂದಿಗೆ ಪೂಜ್ಯ ಬಂತೇಂಜಿಗಳು ಭಾಗವಹಿಸಲಿದ್ದಾರೆ ಹಾಗಾಗಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ?ತಾಲ್ಲೂಕಿನ ಎಲ್ಲಾ ರಾಜಕೀಯ ಪಕ್ಷಗಳ ನಾಯಕರು, ಪ್ರಗತಿಪರ ಸಂಘಟನೆಗಳು, ದಲಿತಪರ ಸಂಘಟನೆಗಳು, ಮಹಿಳಾ ಸಂಘಟನೆಗಳು, ವಿದ್ಯಾರ್ಥಿ ಸಂಘಟನೆಗಳು, ಯುವಕ ಮಿತ್ರರು ಹಾಗೂ ಹೋರಾಟಗಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ ದಸಂಸ ಮುಖಂಡರಾದ ಸಿ.ತಮ್ಮಣ್ಣಯ್ಯ, ಚನ್ನಕಲ್ ಶೇಖರ್, ಈ ರಾಜು ಬಹುಜನ್, ನವಿಲೂರು ಚನ್ನಪ್ಪ, ಹುಣಸವಾಡಿ ಜಗದೀಶ್, ಕೋಮಲಾಪುರ ಗ್ರಾಪಂ ಉಪಾಧ್ಯಕ್ಷ ಈ ರಾಜ್ ದೇವೇಂದ್ರ, ರವಿ, ಉಪಸ್ಥಿತರಿದ್ದರು.

# ಅಯೋಧ್ಯೆಯಲ್ಲಿ ಪ್ರತಿಷ್ಠಾ ದ್ವಾದಶಿ ಸಮಾರಂಭ



**ಅಯೋಧ್ಯೆ,ಡಿ.31:–** ಅಯೋಧ್ಯೆಯಲ್ಲಿ ಶ್ರೀರಾಮನ ಪ್ರತಿಷ್ಠಾಪನೆಯ ಎರಡನೇ ವಾರ್ಷಿಕೋತ್ಸವದ ನೆನಪಿಗಾಗಿ ಇಂದು ಪ್ರತಿಷ್ಠಾ ದ್ವಾದಶಿ ಸಮಾರಂಭವನ್ನು ನಡೆಸಲಾಗುತ್ತಿದೆ. ಈ ಕಾರ್ಯಕ್ರಮವು ರಾಮ ಜನ್ಮಭೂಮಿ ದೇವಾಲಯ ಸಂಕೀರ್ಣದಲ್ಲಿ ನಡೆಯದಿದ್ದು, ದೇಶ ಮತ್ತು ರಾಜ್ಯದ ಪ್ರಮುಖ ನಾಯಕರು ಭಾಗವಹಿಸಲಿದ್ದಾರೆ. ಈ ವಿಶೇಷ ಸಂದರ್ಭಕ್ಕಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅಯೋಧ್ಯೆಗೆ ಆಗಮಿಸಿದ್ದಾರೆ.ರಕ್ಷಣಾ ಸಚಿವರು ರಾಮನಗರಿಯಲ್ಲಿ ಸುಮಾರು ನಾಲ್ಕು ಗಂಟೆಗಳ ಕಾಲ ಕಳೆಯಲಿದ್ದಾರೆ, ರಾಮ ದೇವಾಲಯದಲ್ಲಿ ಧಾರ್ಮಿಕ ವಿಧಿವಿಧಾನಗಳಲ್ಲಿ ಭಾಗವಹಿಸಲಿದ್ದಾರೆ. ವಿಶೇಷ ಅಭಿಷೇಕ –ಧಾರ್ಮಿಕ ಸ್ನಾನ ಸಹ ನೆರವೇರಲಿದೆ. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ರಕ್ಷಣಾ ಸಚಿವರನ್ನು ಅಯೋಧ್ಯಾ ಧಾಮದಲ್ಲಿ ಸ್ವಾಗತಿಸಿದ್ದಾರೆ. ನಂತರ ರಕ್ಷಣಾ ಸಚಿವರು ರಾಮ ಜನ್ಮಭೂಮಿ ದೇವಸ್ಥಾನಕ್ಕೆ ಭೇಟಿ ನೀಡಿ ರಾಮನಿಗೆ ಪ್ರಾರ್ಥನೆ ಸಲ್ಲಿಸಲಿದ್ದಾರೆ ಮತ್ತು ವಿಧ್ಯುಕ್ತ ಪೂಜೆ ಮತ್ತು ಧಾರ್ಮಿಕ ವಿಧಿವಿಧಾನಗಳಲ್ಲಿ ಭಾಗವಹಿಸಿದ್ದಾರೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಅಯೋಧ್ಯೆಯ ಹನುಮಾನ್‌ಗಢಿ ದೇವಸ್ಥಾನಕ್ಕೆ ಭೇಟಿ ನೀಡಿ, ಅಲ್ಲಿ ಪ್ರಾರ್ಥನೆ ಸಲ್ಲಿಸಿದ್ದಾರೆ ನಂತರ ಇಬ್ಬರೂ ನಾಯಕರು ರಾಮ ಜನ್ಮಭೂಮಿ ದೇವಸ್ಥಾನದಲ್ಲಿ ರಾಮಲಲ್ಲಾ ಪ್ರತಿಷ್ಠಾಪನೆಯ ಎರಡನೇ ವಾರ್ಷಿಕೋತ್ಸವವನ್ನು ಗುರುತಿಸುವ ಪ್ರತಿಷ್ಠಾ ದ್ವಾದಶಿ ಸಮಾರಂಭದಲ್ಲಿ ಭಾಗವಹಿಸಿದ್ದಾರೆ.ಪ್ರಾಣ ಪ್ರತಿಷ್ಠಾ ದ್ವಾದಶಿಯ ನಿಮಿತ್ತ ಅಯೋಧ್ಯೆಯ ರಾಮ ಮಂದಿರ ಸಂಕೀರ್ಣದಲ್ಲಿ ಧಾರ್ಮಿಕ ವಿಧಿವಿಧಾನಗಳು ಆರಂಭವಾಗಿವೆ. ಶ್ರೀರಾಮನ ಮಂದಿರದಲ್ಲಿ ಗಣಪತಿ ಪೂಜೆ ಮತ್ತು ಮಂಡಲ ಪೂಜೆ ಸೇರಿದಂತೆ ವಿಶೇಷ ವಿಧಿವಿಧಾನಗಳನ್ನು ನೆರವೇರಿಸಲಾಗುತ್ತಿದೆ.

ಈ ಸಮಾರಂಭದಲ್ಲಿ, ರಾಮಲಲ್ಲಾಗೆ ಅಭಿಷೇಕ ಮತ್ತು ಪ್ರಕಾಶೋತ್ಸವ ಆರತಿ ನಡೆಯಲಿದೆ. ಸಮಾರಂಭದ ಕೊನೆಯಲ್ಲಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ರಾಮ ದೇವಾಲಯದ ನಿರ್ಗಮನ ದ್ವಾರವಾದ ಅಂಗದ್ ತಿಲಾದಲ್ಲಿ ಭಕ್ತರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಅಯೋಧ್ಯಾ ಜಿಲ್ಲೆಯಿಂದ ಸುಮಾರು 1,200 ಸಂತರು ಮತ್ತು ಹೆಚ್ಚಿನ ಸಂಖ್ಯೆಯ ರಾಮ ಭಕ್ತರನ್ನು ಸಮಾರಂಭಕ್ಕೆ ಆಹ್ವಾನಿಸಲಾಗಿದೆ. ರಾಮ ಮಂದಿರ ಸಂಕೀರ್ಣ ಮತ್ತು ರಾಮನಗರಿಯಲ್ಲಿ ವ್ಯಾಪಕ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ.

## ವಿಶೇಷ ಸಾರ್ವಜನಿಕ ಅಭಿಯೋಜಕ ಲೋಕಾಯುಕ್ತ ಬಲೆಗೆ

**ಕಲಬುರಗಿ,ಡಿ.30–**ಇಲ್ಲಿನ 2ನೇ ಎಡಿಜೆ ನ್ಯಾಯಾಲಯದ ವಿಶೇಷ ಸಾರ್ವಜನಿಕ ಅಭಿಯೋಜಕ ರಾಜಮಹೇಂದ್ರ ಜಿ.ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.



ದೌರ್ಜನ್ಯ ಪ್ರಕರಣದಲ್ಲಿ ಉತ್ತಮ ವಾದ ಮಾಡುವುದಕ್ಕಾಗಿ ಇವರು ತೆಲಂಗಾಣ ರಾಜ್ಯದ ವಿಕಾರಾಬಾದ ಜಿಲ್ಲೆಯ ಕಂದನುಲಿ ಗ್ರಾಮದ ನವೀನ್ ತಂದೆ ಅನಂತಯ್ಯ ಅವರಿಂದ 25 ಸಾವಿರ ರೂ.ಲಂಚ ಸ್ವೀಕರಿಸುತ್ತಿದ್ದ ವೇಳೆಯಲ್ಲಿ ಲೋಕಾಯುಕ್ತ ಎಸ್.ಪಿ.ಸಿದ್ದರಾಜು ಅವರ ಮಾರ್ಗದರ್ಶನದಲ್ಲಿ ಡಿವೈಎಸ್‌ಪಿ ಶೀಲವಂತ ಮತ್ತು ಸಿಬ್ಬಂದಿ ದಾಳಿ ನಡೆಸಿ ಆರೋಪಿಯನ್ನು ವಶಕ್ಕೆ ಪಡೆದು 25 ಸಾವಿರ ರೂಪಾಯಿಗಳನ್ನು ವಶಪಡಿಸಿಕೊಂಡಿದ್ದಾರೆ.

ದೌರ್ಜನ್ಯ ಪ್ರಕರಣದಲ್ಲಿ ಉತ್ತಮ ವಾದ ಮಾಡುವುದಕ್ಕಾಗಿ ಆರೋಪಿ ರಾಜಮಹೇಂದ್ರ ಜಿ. 50 ಸಾವಿರ ಬೇಡಿಕೆ ಇಟ್ಟಿದ್ದರು. ಈ ಹಿಂದೆ 20 ಸಾವಿರ ರೂ.ಸ್ವೀಕರಿಸಿದ್ದರು ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

# ಜಾನಪದ ತಜ್ಞ ಪ್ರಶಸ್ತಿ ಪುರಸ್ಕೃತ ಪ್ರೊ.ಪೋತೆಗೆ ಸನ್ಮಾನ

**ಕಲಬುರಗಿ,ಡಿ.31–**ಪ್ರೋ.ಬಿ.ಎಸ್. ಗದ್ದಗಿಮಠ ಜಾನಪದ ತಜ್ಞ ಪ್ರಶಸ್ತಿಗೆ ಗುಲಬರ್ಗಾ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕರು ಹಾಗೂ ಕಲಾ ನಿಕಾಯದ ಡೀನರು ಆದ ಪ್ರೋ.ಎಚ್.ಟಿ.ಪೋತೆ ಅವರು ಭಾಜನರಾದ ಕಾರಣ ಕನ್ನಡ ಅಧ್ಯಯನ ಸಂಸ್ಥೆಯ ಅತಿಥಿ ಉಪನ್ಯಾಸಕರಾದ ಡಾ.ಎಂ.ಬಿ.ಕಟ್ಟಿ, ಡಾ.ಹಣಮಂತ ಮೇಲಕೇರಿ, ಡಾ.ಸಂತೋಷ ಕಂಬಾರ, ಡಾ.ಪ್ರಕಾಶ ಸಂಗಮ, ಡಾ. ಜಗನ್ನಾಥ, ಡಾ. ಚಾಂದಸಾಬ, ಡಾ. ಸಂತೋಷ ಹಿರೇಮನಿ, ಡಾ.ಸಿದ್ದಾರ್ಥ ಬಬಲಾದ, ಡಾ.ಶುಲಾಬಾಯಿ, ಡಾ.ಶೀಲಾದೇವಿ ಬಿರಾದಾರ, ಸಂತೋಷ ಮಾನುರೆ, ಲಕ್ಷ್ಮಿರಾಣಿ ರೋಣದ, ಸುಭಾಶ್ಚಂದ್ರ ಮೇಲಿನಮನಿ ಮತ್ತು ವಿದ್ಯಾರ್ಥಿಗಳು ಸೇರಿ ಸನ್ಮಾನಿಸಿದರು.

# ಹೊಸ ವರ್ಷ ಕಟ್ಟೆಚ್ಚರ

ಬೆಂಗಳೂರು,ಡಿ.31–ಹೊಸ ವರ್ಷಾಚರಣೆ ಸಂಭ್ರಮಾಚರಣೆ ಹಿನ್ನಲೆಯಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ರಾಜ್ಯಾದ್ಯಂತ ಅಭೂತಪೂರ್ವ ಪೊಲೀಸ್ ಬಂದೋಬಸ್ಥ್ ಕೈಗೊಳ್ಳಲಾಗಿದೆ.ಬೆಂಗಳೂರು, ಮೈಸೂರು, ಮಂಗಳೂರು, ಹುಬ್ಬಳ್ಳಿ ಧಾರವಾಡ,ಬೆಳಗಾವಿ, ಕಲಬುರಗಿ ಸೇರಿದಂತೆ ರಾಜ್ಯ ಮಹಾನಗರಗಳು ಜಿಲ್ಲಾ, ಪ್ರಮುಖ ತಾಲ್ಲೂಕು ಕೇಂದ್ರಗಳಲ್ಲಿ ಭದ್ರತೆಯನ್ನು ಬಿಗಿಗೊಳಿಸಿ ಪರಿಸ್ಥಿತಿಯ ಮೇಲೆ ಹಿರಿಯ ಪೊಲೀಸ್ ಅಧಿಕಾರಿಗಳು ನಿಗಾ ವಹಿಸಿದ್ದಾರೆ.

ಹೊಸವರ್ಷ ಸಂಭ್ರಮದ ಇಂದು ರಾತ್ರಿ 8 ರಿಂದ ನಾಳೆ ಬೆಳಿಗ್ಗೆಯವರೆಗೆ ಭದ್ರತೆಯನ್ನು ಬಿಗಿಗೊಳಿಸಲಾಗಿದೆ ಹೊಸ 'ವರ್ಷದ ಸಂಭ್ರಮಾಚರಣೆ ನಡೆಯುವ ಪ್ರಮುಖ ಪ್ರದೇಶಗಳು ರಸ್ತೆಗಳಲ್ಲಿ ಮುಂಜಾಗ್ರತಾ ಕ್ರಮವಾಗಿ ಸಿಸಿ ಕ್ಯಾಮರಾಗಳನ್ನು ಅಳವಡಿಸಿ ಜನ ಸಂದಣಿ ಮೇಲೆ ಕಣ್ಣಿಡಲು ಡ್ರೋನ್ ಕ್ಯಾಮರಾಗಳ ವ್ಯವಸ್ಥೆ ಮಾಡಲಾಗಿದೆ.ರಾಜ್ಯದ ಹೆಚ್ಚು ಜನ ಸೇರುವ ರೆಸ್ಟೋರೆಂಟ್ ಗಳು ರೆಸಾರ್ಟ್ ಬಾರ್ ಆಂಡ್ ರೆಸ್ಟೋರೆಂಟ್ ಗಳು ಪ್ರವಾಸಿ ಕೇಂದ್ರಗಳಿಗೆ ಭದ್ರತೆ ಕೈಗೊಂಡು ನಿಗಾವಹಿಸಲಾಗಿದೆ, ಕುಡಿದು ವಾಹನ ಚಲಾಯಿಸುವವರ ತಪಾಸಣೆ ನಡೆಸಲು ಪೊಲೀಸರು ಮುಂದಾಗಿದ್ದಾರೆ.ರಾಮನಗರ, ಕೋಲಾರ, ಮೈಸೂರು ಸೇರಿದಂತೆ ರಾಜ್ಯಾದ್ಯಂತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಆಯಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಮಾರ್ಗಸೂಚಿ ಬಿಡುಗಡೆ ಮಾಡಿದ್ದಾರೆ.

ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಬಂದೋಬಸ್ತ್ ಕಲ್ಪಿಸಲಾಗಿದೆ ಎಂದು ರಾಮನಗರ ಎಸ್ಪಿ ಶ್ರೀನಿವಾಸ್ ಗೌಡ ತಿಳಿಸಿದ್ದಾರೆ.ಬೆಂಗಳೂರು ದಕ್ಷಿಣ ಜಿಲ್ಲೆಯಾದ್ಯಂತ ಒಟ್ಟು 66 ಹೋಂ ಸ್ಟೇ, 40ಕ್ಕೂ ಹೆಚ್ಚು ರೆಸಾರ್ಟ್‌ಗಳೂ ಸೇರಿದಂತೆ ಅನೇಕ ಪ್ರೇಕ್ಷಣೀಯ ಸ್ಥಳಗಳಿವೆ. ಈಗಾಗಲೇ ಹೋಂ ಸ್ಟೇ ಹಾಗೂ ರೆಸಾರ್ಟ್ ಮಾಲೀಕರೊಂದಿಗೆ ಮಾತನಾಡಿದ್ದು, ಸರ್ಕಾರದ ನಿಯಮದಂತೆ ಪೂರ್ವಾನುಮತಿ ಕಡ್ಡಾಯಗೊಳಿಸಲಾಗಿದೆ. ಇದಲ್ಲದೇ ಜಿಲ್ಲೆಯಾದ್ಯಂತ 700ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ಭದ್ರತೆಗೆ ನಿಯೋಜಿಸಲಾಗಿದೆ.ಪ್ರೇಕ್ಷಣೀಯ ಸ್ಥಳಗಳಾದ ಸಂಗಮ, ಮೇಕೆದಾಟು, ಶ್ರೀರಾಮದೇವರಗಡ್ಡ, ರೇವಣಸಿದ್ದೇಶ್ವರ ಬೆಟ್ಟ, ಸಾವನದುರ್ಗಬೆಟ್ಟ ಸೇರಿದಂತೆ ಹಲವು ಸ್ಥಳಗಳಲ್ಲಿ 31ರ ರಾತ್ರಿಯಿಂದಲೇ ನಿಷೇಧಾಜ್ಞೆ ಹೊರಡಿಸಲಾಗಿದೆ. ಯಾರೂ ಕೂಡ ರಾತ್ರಿ ಸಂಚಾರ ನಡೆಸದಂತೆ ಕ್ರಮ ಕೈಗೊಳ್ಳಲಾಗಿದೆ" ಎಂದರು.

**ಹೆದ್ದಾರಿಯಲ್ಲಿ ಭದ್ರತೆ:**ಹೆದ್ದಾರಿಯಲ್ಲೂ ಕೂಡ ಬಿಗಿ ಬಂದೋಬಸ್ತ್ ಕಲ್ಪಿಸಲಾಗಿದ್ದು, ಕುಡಿದು ವಾಹನ ಚಾಲನೆ ಮಾಡುವವರನ್ನು ಹಿಡಿಯುವುದಕ್ಕಾಗಿಯೇ 20ಕ್ಕೂ ಹೆಚ್ಚು ತಪಾಸಣೆ ಕೇಂದ್ರ ಸ್ಥಾಪಿಸಲಾಗಿದೆ. ಯಾರೂ ಕೂಡ ಕುಡಿದು ವಾಹನ ಚಾಲನೆ ಮಾಡಬೇಡಿ. ಹೆದ್ದಾರಿಯಲ್ಲಿ ವೀಲಿಂಗ್ ಮಾಡಿದರೆ ಕ್ರಮ ಜರುಗಿಸಲಾಗುವುದು" ಎಂದು ಎಸ್ಪಿ ಎಚ್ಚರಿಕೆ ನೀಡಿದ್ದಾರೆ.

**ಮಾರ್ಗಸೂಚಿ ಬಿಡುಗಡೆ:**ಕೋಲಾರ ಜಿಲ್ಲಾ ಪೊಲೀಸ್ ಇಲಾಖೆಯಿಂದ ಮಾರ್ಗಸೂಚಿ ಬಿಡುಗಡೆ ಮಾಡಲಾಗಿದೆ. 31ರ ಮಧ್ಯರಾತ್ರಿ 12:30ರವರೆಗೆ ಮಾತ್ರ ಸಂಭ್ರಮಾಚರಣೆಗೆ ಅವಕಾಶ ನೀಡಲಾಗಿದೆ. 12:30ರ ನಂತರ ಯಾವುದೇ ಸಂಭ್ರಮಾಚರಣೆಗಳಿಗೆ ಅವಕಾಶ ಇಲ್ಲ. ಈ ಬಗ್ಗೆ ಎಲ್ಲ ಹೋಟೆಲ್, ರೆಸ್ಟೋರೆಂಟ್, ಬಾರ್‌ಗಳಿಗೆ ಮಾರ್ಗಸೂಚಿ ಹೊರಡಿಸಲಾಗಿದೆ.ಆಯಕಟ್ಟಿನ ಸ್ಥಳಗಳಲ್ಲಿ ಪೊಲೀಸರ ಕಟ್ಟೆಚ್ಚರ ವಹಿಸಲಾಗಿದೆ. ಹೆದ್ದಾರಿಗಳಲ್ಲಿ ವೀಲಿಂಗ್ ಹಾವಳಿ ತಡೆಯಲು ವಿಶೇಷ ತಂಡ ರಚಿಸಲಾಗಿದೆ. ಹೆದ್ದಾರಿಗಳಲ್ಲಿ ವೀಲಿಂಗ್ ಮಾಡುವುದು ಕಂಡುಬಂದರೆ ದೂರು ದಾಖಲಿಸಿಕೊಳ್ಳಲಾಗುತ್ತದೆ. ರಾಷ್ಟ್ರೀಯ ಹೆದ್ದಾರಿ 75ರ ಎಲ್ಲ ಫ್ಲೈ ಓವರ್‌ಗಳಲ್ಲಿ 31ರ ರಾತ್ರಿ ವಾಹನ ಸಂಚಾರ ನಿಷೇಧಿಸಲಾಗಿದೆ. ಪೋಷಕರು ತಮ್ಮ ಮಕ್ಕಳ ಬಗ್ಗೆ ಜಾಗರೂಕರಾಗಿರಿ. ಮಕ್ಕಳ ಚಲನವಲನಗಳ ಬಗ್ಗೆ ಸಂಪೂರ್ಣ ಮಾಹಿತಿ ಪಡೆಯಿರಿ. ಸಂಭ್ರಮಾಚರಣೆಯಲ್ಲಿ ಕುಡಿದು ವಾಹನ ಚಲಾಯಿಸಬೇಡಿ, ಮದ್ಯಪಾನ ಮಾಡುವುದಾದರೆ ತಮ್ಮ ತಮ್ಮ ಮನೆಗಳಲ್ಲಿ ಸಂಭ್ರಮಾಚರಣೆ ಮಾಡಿ, ಕುಡಿದು ವಾಹನ ಚಲಾಯಿಸಿದರೆ ಪ್ರಕರಣಗಳನ್ನು ಕಟ್ಟುನಿಟ್ಟಾಗಿ ದಾಖಲಿಸಿ ನ್ಯಾಯಾಲಯಕ್ಕೆ ಕಳುಹಿಸುತ್ತೇವೆ ಎಂದು ಎಸ್ಪಿ ನಿಖಿಲ್ ಬಿ. ತಿಳಿಸಿದ್ದಾರೆ.

**ಚಾಮುಂಡಿ ಬೆಟ್ಟಕ್ಕೆ ಭದ್ರತೆ:** ಜ.1ರಂದು ಚಾಮುಂಡಿ ಬೆಟ್ಟಕ್ಕೆ ಹೆಚ್ಚಿನ ಭಕ್ತರು ಆಗಮಿಸುವ ನಿರೀಕ್ಷೆ ಇದ್ದು, ಅಗತ್ಯ ವ್ಯವಸ್ಥೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ್ ರೆಡ್ಡಿ ಜಿ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಧಿಕಾರಿಗಳ ಸಭೆ ನಡೆಸಿ ಅವರು ಮಾತನಾಡಿದರು.ಚಾಮುಂಡಿ ಬೆಟ್ಟದಲ್ಲಿ ಜ.2ರಂದು ಲಲಿತಾ ಸಹಸ್ರನಾಮ ಕಾರ್ಯಕ್ರಮ, ಜ.3 ಹಾಗೂ 4ರಂದು ವಾರಾಂತ್ಯವಿದ್ದು, ದರ್ಶನಕ್ಕೆ ಬರುವ ಭಕ್ತರ ನಡುವೆ ನೂಕುನುಗ್ಗಲು ಉಂಟಾಗದಂತೆ ಸರದಿ ಸಾಲುಗಳನ್ನು ಹೆಚ್ಚಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಸುಗಮ ವಾಹನ ಸಂಚಾರಕ್ಕೆ ಹಾಗೂ ವಾಹನ ನಿಲುಗಡೆಗೆ ಸಂಬಂಧಿಸಿದಂತೆ ಯಾವುದೇ ಸಮಸ್ಯೆ ಉಂಟಾಗದಂತೆ ನೋಡಿಕೊಳ್ಳಿ. ಹೆಚ್ಚಿನ ಜನದಟ್ಟಣೆ ಉಂಟಾದ ಸಂದರ್ಭದಲ್ಲಿ ಗಣ್ಯ ವ್ಯಕ್ತಿಗಳ ವಾಹನಗಳನ್ನು ಸಹ ಮಹಿಷಾಸುರ ಪ್ರತಿಮೆ ಬಳಿ ನಿಲ್ಲಿಸಿ ನಂತರ ಬ್ಯಾಟರಿಚಾಲಿತ ವಾಹನದ ವ್ಯವಸ್ಥೆ ಮಾಡುವುದು ಉತ್ತಮ ಎಂದು ಸಲಹೆ ನೀಡಿದರು.

**ಕುಡಿಯುವ ನೀರು:** ಕುಡಿಯುವ ನೀರಿನ ವ್ಯವಸ್ಥೆಗಳನ್ನು ಹೆಚ್ಚಿನ ಸ್ಥಳಗಳಲ್ಲಿ ಮಾಡಿ. ಸ್ವಚ್ಛತೆ ಕಪಾಡಲು ಹೆಚ್ಚಿನ ಸ್ವಚ್ಛತಾ ಸಿಬ್ಬಂದಿಯುನ್ನು ನಿಯೋಜಿಸಿ. ಕೆಎಸ್‌ಆರ್‌ಟಿಸಿ ನಗರ ವಿಭಾಗದಿಂದ ಹೆಚ್ಚಿನ ಬಸ್ ಟ್ರಿಪ್‌ಗಳನ್ನು ಮಾಡುವಂತೆಯೂ ನಿರ್ದೇಶನ ಕೊಟ್ಟರು. ಆರೋಗ್ಯ ಇಲಾಖೆಯ ವತಿಯಿಂದ ಆಂಬ್ಯುಲೆನ್ಸ್ ನಿಯೋಜಿಸಬೇಕು ಹಾಗೂ ದಾನಿಗಳು ನೀಡುವ ಆಹಾರ ಪದಾರ್ಥಗಳಲ್ಲಿ ದಾಸೋಹ ಭವನದಲ್ಲಿ ಪ್ರಸಾದ ಸಿದ್ಧಪಡಿಸಿದರೂ ನೀಡುವ ಆಹಾರ ಪದರ್ಥಗಳ ಗುಣಮಟ್ಟ ಪರಿಶೀಲಿಸಬೇಕು. ಯಾವುದೇ ಅಹಿತಕರ ಘಟನೆ ನಡೆಯದಂತೆ ಎಚ್ಚರಿಕೆ ವಹಿಸಬೇಕು ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯುಕೇಶ್ ಕುಮಾರ್, ಚಾಮುಂಡಿ ಬೆಟ್ಟ ಪ್ರಾಧಿಕಾರದ ಕಾರ್ಯದರ್ಶಿ ರೂಪ, ದೇವಸ್ಥಾನದ ಅರ್ಚಕ ಶಶಿಶೇಖರ್ ದೀಕ್ಷಿತ್ ಸೇರಿದಂತೆ ಇತರೆ ಅಧಿಕಾರಿಗಳು ಸಭೆಯಲ್ಲಿ ಇದ್ದರು.

ಏನೇನಿರಲ್ಲ? ಚಿಕ್ಕಬಳ್ಳಾಪುರ ತಾಲೂಕಿನ ವಿಶ್ವಪ್ರಸಿದ್ಧ ಪ್ರವಾಸಿತಾಣ ನಂದಿಗಿರಿಧಾಮಕ್ಕೆ ಡಿಸೆಂಬರ್ 31ರ ಮಧ್ಯಾಹ್ನ 2 ಗಂಟೆಯಿಂದ ಜನವರಿ 1ರ ಬೆಳಗ್ಗೆ 10 ಗಂಟೆಯವರೆಗೆ ಪ್ರವಾಸಿಗರ ಪ್ರವೇಶಕ್ಕೆ ನಿರ್ಬಂಧ ವಿಧಿಸಲಾಗಿದೆ.ಮುಳ್ಳಯ್ಯನಗಿರಿ, ಸೀತಾಳಯ್ಯನಗಿರಿ ಸೇರಿದಂತೆ ಚಿಕ್ಕಮಗಳೂರು ಜಿಲ್ಲೆಯ ಎಲ್ಲ ಪ್ರವಾಸಿ ತಾಣಗಳಿಗೆ ಡಿಸೆಂಬರ್ 31ರ ಸಂಜೆ 6 ಗಂಟೆಯಿಂದ ಜನವರಿ 1ರ ಬೆಳಗ್ಗೆ 6 ಗಂಟೆವರೆಗೆ ನಿರ್ಬಂಧ ಹೇರಲಾಗಿದೆ.ಮಂಗಳೂರು ಸೇರಿದಂತೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಮಧ್ಯರಾತ್ರಿ 12.30ರವರೆಗೆ ಮಾತ್ರ ಹೊಸ ವರ್ಷಾಚರಣೆಗೆ ಅವಕಾಶ ನೀಡಲಾಗಿದೆ. ಪಟಾಕಿ ಸಿಡಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.ಕೊಡಗು ಜಿಲ್ಲೆಯಲ್ಲಿ ರಾತ್ರಿ 10 ಗಂಟೆಯ ಬಳಿಕ ಒಳಾಂಗಣದಲ್ಲಿ ಮಾತ್ರ ಪಾರ್ಟಿ ಮಾಡಲು ಅವಕಾಶ.

ಬೆಂಗಳೂರಿನ ಚರ್ಚ್ ಸ್ಟ್ರೀಟ್, ಎಂಜಿ ರಸ್ತೆಯಲ್ಲಿ ಒಮ್ಮೆ ಹೋಗಿ ಹೊರಹೋದವರಿಗೆ ಮರಳಿ ಎಂಟ್ರಿ ಇಲ್ಲ.ನಮ್ಮ ಮೆಟ್ರೋ ಎಂಜಿ ರಸ್ತೆ, ಟ್ರಿನಿಟಿ ನಿಲ್ದಾಣ ಬಂದ್.ಬೆಂಗಳೂರಿನಲ್ಲಿ ಸಂಜೆ 6 ರ ನಂತರ ಪಾರ್ಕ್‌ಗಳು ಬಂದ್.ಎಂಜಿ ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್‌ಗಳಲ್ಲಿ ಸಂಜೆಯ ನಂತರ ವಾಹನ ಸಂಚಾರ ಬಂದ್. ಏನೇನಿರುತ್ತೆ?ಬೆಂಗಳೂರಿನಲ್ಲಿ ತಡರಾತ್ರಿ 2 ಗಂಟೆ ವರೆಗೆ ಬಿಎಂಟಿಸಿ ಬಸ್,ಮುಂಜಾನೆ 3 ಗಂಟೆವರೆಗೆ ನಮ್ಮ ಮೆಟ್ರೋ ರೈಲು ಸೇವೆ.ಬೆಂಗಳೂರು ಸೇರಿದಂತೆ ರಾಜ್ಯದಾದ್ಯಂತ ಪಬ್, ಬಾರ್, ರೆಸ್ಟೋರೆಂಟ್‌ಗಳು ತಡರಾತ್ರಿ ವರೆಗೂ ಕಾರ್ಯಾಚರಿಸಲಿವೆ.ಅಂಗಡಿಗಳು, ವಾಣಿಜ್ಯ ಮಳಿಗೆಗಳಿಗೆ ರಾತ್ರಿ 1 ರ ವರೆಗೂ ಕಾರ್ಯಾಚರಣೆಗೆ ಅನುಮತಿ ಇದೆ. ಕರಾವಳಿ ನಗರಗಳಾದ ಮಂಗಳೂರು, ಉಡುಪಿಗಳಲ್ಲಿ ಬೀಚ್ ಬದಿಯ ರೆಸಾರ್ಟ್‌ಗಳು, ಹೋಮ್ ಸ್ಟೇಗಳು ತೆರೆದಿರಲಿವೆ. ಮಂಗಳೂರು ನಗರದಲ್ಲಿ ರಾತ್ರಿ 12.30ರೊಳಗೆ ಹೊಸ ವರ್ಷ ಆಚರಣೆ ಪೂರ್ಣಗೊಳಿಸುವಂತೆ ಸೂಚನೆ ನೀಡಲಾಗಿದೆ.

# ವೆಂಕಟಾಪುರದ ಪ್ರಸಿದ್ಧ ತಿಮ್ಮಪ್ಪನ ದೇಗುಲದಲ್ಲಿ ವಿಶೇಷ ಪೂಜೆ

**ಕೋಲಾರ,ಡಿ,31–** ಸುಮಾರು 800 ವರ್ಷಗಳಿಗೂ ಹೆಚ್ಚು ಪುರಾತನವಾದ ತಾಲ್ಲೂಕಿನ ವೆಂಕಟಾಪುರ ಗ್ರಾಮದ ಲಕ್ಷ್ಮೀವೆಂಕಟರಮಣಸ್ವಾಮಿ ದೇವಾಲಯದಲ್ಲಿ ವೈಕುಂಠ ಏಕಾದಶಿ ಅಂಗವಾಗಿ ವಿಶೇಷ ಪೂಜೆ, ಅಲಂಕಾರ,ಅನ್ನದಾನ ನಡೆಸಲಾಗಿದ್ದು, ಜಿಲ್ಲೆ ಹಾಗೂ ಹೊರಗಿನ ಸಾವಿರಾರು ಮಂದಿ ಸ್ವಾಮಿಯ ದರ್ಶನ ಪಡೆದರು.



ಲಕ್ಷ್ಮಿವೆಂಕಟೇಶ್ವರಸ್ವಾಮಿ ದೇವಾಲಯದಿಂದಲೇ ಈ ಗ್ರಾಮಕ್ಕೆ ವೆಂಕಟಾಪುರ ಎಂದು ಹೆಸರು ಬಂದಿದೆ ಎನ್ನಲಾಗಿದ್ದು, ಶಿಥಿಲವಾಗಿದ್ದ ಪುರಾತನ ದೇವಾಲಯವನ್ನು ಕಳೆದ 14 ವರ್ಷಗಳ ಹಿಂದೆ ಕೋಲಾರದ ದೊಡ್ಡಗೌಡರು ಸೇರಿದಂತೆ ಗ್ರಾಮಸ್ಥರು ಜೀರ್ಣೋದ್ಧಾರ ಮಾಡಿದ್ದು, ಈ ದೇವಾಲಯದಲ್ಲಿ ಪೂಜೆ ಸಲ್ಲಿಸಿ ಪ್ರಾರ್ಥಿಸಿದರೆ ಇಷ್ಟಾರ್ಥ ನೆರವೇರುತ್ತದೆ ಎಂಬ ನಂಬಿಕೆ ಈ ಭಾಗದ ಜನರಲ್ಲಿದೆ.

ದೇವಾಲಯವನ್ನು ಅತ್ಯಂತ ಸುಂದರವಾಗಿ ನವೀಕರಿಸಲಾಗಿದ್ದು, ಪೂಜಾ ಕಾರ್ಯಗಳನ್ನು ಅರ್ಚಕರಾದ ಮೋಹನ್ ಕುಮಾರ್ ಮತ್ತು ಶಾನಭೋಗ್ ಸುಬ್ರಮಣ್ಯ, ಕಿರಣ್ ತಂಡದವರು ನಡೆಸಿದ್ದು, ಸ್ವಾಮಿಗೆ ವಿಶೇಷ ಅಲಂಕಾರ ಮಾಡಿದ್ದರು.

ದೇವಾಲಯಕ್ಕೆ ವಿವಿಧ ಪಕ್ಷಗಳ ಮುಖಂಡರಾದ ಮಾಜಿ ಸಚಿವ ವರ್ತೂರು ಪ್ರಕಾಶ್,ಅಫೆಕ್ಸ್ ಬ್ಯಾಂಕ್ ನಿರ್ದೇಶಕ ಬ್ಯಾಲಹಳ್ಳಿ ಗೋವಿಂದಗೌಡ, ವಿಧಾನಪರಿಷತ್ ಸದಸ್ಯ ಅನಿಲ್ ಕುಮಾರ್, ಮುಖಂಡ ಸಿಎಂಆರ್.ಶ್ರೀನಾಥ್, ಕೋಚಿಮುಲ್ ನಿರ್ದೇಶಕ ವಡಗೂರು ಹರೀಶ್, ಭೇಟಿ ನೀಡಿ ಸ್ವಾಮಿಯ ದರ್ಶನ ಪಡೆದರು.

ಕಾರ್ಯಕ್ರಮದ ಉಸ್ತುವಾರಿಯನ್ನು ಗ್ರಾಮದ ಮುಖಂಡರಾದ ಗ್ರಾ.ಪಂ ಮಾಜಿ ಉಪಾಧ್ಯಕ್ಷ ಎಂ.ಶಂಕರ್, ಹಾಲಿ ಸದಸ್ಯರಾದ ಅಪ್ಪಯ್ಯಣ್ಣ, ಶ್ರೀನಿವಾಸಗೌಡ, ಈರಣ್ಣಭೋವಿ,ಡೈರಿ ಶ್ರೀನಿವಾಸ್, ಶ್ರೀನಿವಾಸ ಭೋವಿ, ಜ್ಯೋತೆಪ್ಪ, ಸುರೇಶ್, ಎಸ್‌ಎಫ್‌ಸಿಎಸ್ ನಿರ್ದೇಶಕ ಸುಬ್ರಮಣಿ,ಎಂಪಿಸಿಎಸ್ ಅಧ್ಯಕ್ಷ ಮಂಜುನಾಥ್, ಶ್ರೀಧರ ಬಾಬು,ಸುಣ್ಣಕಲ್ಲು ರಮೇಶ್, ಸೇರಿದಂತೆ ಗ್ರಾಮಸ್ಥರು ವಹಿಸಿದ್ದರು.

# ನೀರಿನ ಸಮಸ್ಯೆ ಬಗೆಹರಿಸಲು ಮನವಿ



**ಕೋಲಾರ ಡಿಸೆಂಬರ್ 31–**ಕೋಲಾರ ನಗರ 5ನೇ ವಾರ್ಡ್ ಕುರುಬರ ಪೇಟೆ ನಿವಾಸಿಗಳು ಕಳೆದ ನಾಲ್ಕು ವರ್ಷಗಳಿಂದ ತೀವ್ರ ನೀರಿನ ಸಮಸ್ಯೆ ಎದುರಿಸುತ್ತಿದ್ದು, ಕೆಲ ತಿಂಗಳುಗಳ ಮೊದಲು ಯರಗೋಳ್ ನೀರಿನ ಸಂಪರ್ಕ ನೀಡಲಾಯಿತು. ಆದರೆ ಸಮರ್ಪಕವಾಗಿ ನೀರು ಸರಬರಾಜು ಕೊಡುತ್ತಿಲ್ಲ.ಯರಗೋಳ್ ನೀರು ಸರಬರಾಜಿನ ಮುಖ್ಯ ಪೈಪ್ ಒಡೆದಿದೆಯೆಂದೂ ದುರಸ್ತಿಯಾಗುತ್ತಿದೆ ಎಂದೂ 5ನೇ ವಾರ್ಡಿನ ಕುರುಬರ ಪೇಟೆಗೆ ನಗರಸಭೆ ಒಂದು ತಿಂಗಳಿಂದ ನೀರು ಸರಬರಾಜು ಕೊಟ್ಟಿಲ್ಲ. ಯರಗೋಳ್ ನೀರಿನ ಸರಬರಾಜಿನಲ್ಲಿ ಇದೇ ರೀತಿ ಬೇರೆ ಬೇರೆ ಕಾರಣಗಳಿಂದ ಏರುಪೇರಾಗುತ್ತಿರುತ್ತದೆ. ಆದ್ದರಿಂದ ಅಂತಹ ಸಂದರ್ಭಗಳಲ್ಲಿ ಬದಲಿ ವ್ಯವಸ್ಥೆಯಾಗಿ ಬೋರ್ ವೆಲ್ ನೀರಿನ ಸಂಪರ್ಕ ಕಲ್ಪಿಸಿ ನೀರಿನ ಸಮಸ್ಯೆಯ ಬಗೆಹರಿಸಲು ಕ್ರಮ ಕೈಗೊಳ್ಳಬೇಕೆಂದು ಕುರುಬರ ಪೇಟೆಯ ನಿವಾಸಿಗಳು ಜಿಲ್ಲಾಧಿಕಾರಿಗಳಿಗೆ ಹಾಗೂ ನಗರಸಭೆ ಆಯುಕ್ತರಿಗೆ ಮನವಿ ಪತ್ರ ಸಲ್ಲಿಸಿ ನೀರಿನ ಸಮಸ್ಯೆಯ ಬಗೆಹರಿಸಲು ಮನವಿ ಮಾಡಿದ್ದಾರೆ.

# ಅವರೇಕಾಯಿ ವಹಿವಾಟು ಎ.ಪಿ.ಎಂ.ಸಿ.ಗೆ ಸ್ಥಳಾಂತರಿಸಲು ಆಗ್ರಹ



**ಶ್ರೀನಿವಾಸಪುರ, ಡಿ 31–**ಎಂ.ಜಿ ರಸ್ತೆಯಲ್ಲಿ ನಡೆಯುತ್ತಿರುವ ಅವರೇ ಕಾಯಿ ವಹಿವಾಟನ್ನು ಕೃಷಿ ಉತ್ಪನ ಮಾರುಕಟ್ಟೆಗೆ ಸ್ಥಳಾಂತರ ಮಾಡಿ ರೈತರಿಗೆ ತೂಕದಲ್ಲಿ ಹರಾಜಿನಲ್ಲಿ ಆಗುತ್ತಿರುವ ಮೋಸವನ್ನು ತಪ್ಪಿಸಿ ಟ್ರಾಫಿಕ್ ಸಮಸ್ಯೆಗೆ ಮುಕ್ತಿ ನೀಡಬೇಕೆಂದು ರೈತಸಂಘದಿಂದ ಪುರಸಭೆ ಮುಖ್ಯಾಧಿಕಾರಿ ನಾಗರಾಜರವರಿಗೆ ಮನವಿ ನೀಡಿ ಒತ್ತಾಯಿಸಲಾಯಿತು.

ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ ನಾರಾಯಣಗೌಡ ಮಾತನಾಡಿ ಕಳೆದ 5 ವರ್ಷಗಳಿಂದ ನಿರಂತರವಾಗಿ ಅವರೇಕಾಯಿ ಅವಕ ಪ್ರಾರಂಭವಾದಗ ಕೃಷಿ ಉತ್ಪನ ಮಾರುಕಟ್ಟೆಯಲ್ಲಿ ಪರವಾನಿಗೆ ಪಡೆದಿರುವ ವ್ಯಾಪಾರಸ್ಥರು ಕಡ್ಡಾಯವಾಗಿ ನಿಗಧಿತ ಮಾರುಕಟ್ಟೆಯಲ್ಲಿ ವ್ಯಾಪಾರ ನಡೆಸಿ ರೈತರಿಗೆ ನ್ಯಾಯುತ ಬೆಲೆ ನೀಡುವಂತೆ ನಿರಂತರವಾಗಿ ರೈತಸಂಘದಿಂದ ತಾಲ್ಲೂಕು ಆಡಳಿಕ್ಕೆ ಪುರಸಭೆ ಅಧಿಕಾರಿಗಳಿಗೆ ಮನವಿ ಮಾಡುತ್ತಿದ್ದರೂ ಎಂ.ಜಿ ರಸ್ತೆಯಲ್ಲಿನ ಅವರೇ ಕಾಯಿ ವಹಿವಾಟಿಗೆ ಶಾಶ್ವತ ಪರಿಹಾರ ಕಲ್ಪಿಸುವಲ್ಲಿ ವಿಫಲವಾಗಿರುವ ಅಧಿಕಾರಿಗಳ ರೈತ ವಿರೋಧಿ ಧೋರಣೆಯ ವಿರುದ್ಧಆಕ್ರೋಶ ವ್ಯಕ್ತಪಡಿಸಿದರು.

ಅಧಿಕಾರಿಗಳು ಬೇಜವಾಬ್ದಾರಿ ರಾಜಕಾರಣಿಗಳ ನಿರ್ಲಕ್ಷ್ಯದಿಂದ ಅವರೇಕಾಯಿ ಬೆಳೆದ ರೈತರಿಗೆ ಮಾರುಕಟ್ಟೆ ವ್ಯವಸ್ಥೆ ಇಲ್ಲದೇ ಗಡಿಭಾಗದ ರೈತರು ಆಂಧ್ರ ಮಾರುಕಟ್ಟೆಗೆ ಅವರೇಕಾಯಿ ಸಾಗಣಿಕೆ ಮಾಡಿ ಕಡಿಮೆ ದರಕ್ಕೆ ಮಾರಾಟ ಮಾಡುವ ಮೂಲಕ ನಷ್ಟಹೊಂದುತ್ತಿದ್ದರು ರೈತರ ಹಿತ ಕಾಯ್ದೆ ವ್ಯಾಪಾರಸ್ಥರ ಪರವಾಗಿ ನಿಂತಿರುವ ಅಧಿಕಾರಿಗಳಿಗೆ ರೈತರ ಶಾಪ ತಟ್ಟುವ ಕಾಲ ದೂರ ಇಲ್ಲವೆಂದು ಹಿಡಿ ಶಾಪ ಹಾಕಿದರು.

ಕಾನೂನನ್ನು ಪಾಲಿಸದ ಜನಸಾಮಾನ್ಯರಿಗೆ ತೊಂದರೆ ಕೊಡುತ್ತಿರುವ ಅವರೇ ಕಾಯಿ ವ್ಯಾಪಾರಸ್ಥರಿಗೆ ರಕ್ಷಣೆ ಯಾರು? ರಾಜಕೀಯ ವ್ಯಕ್ತಿಗಳ ಒತ್ತಡ ಅಧಿಕಾರಿಗಳ ಮೇಲೆ ಇದೆಯೇ? ಅಥವಾ ಅಧಿಕಾರಿಗಳೇ ತಮ್ಮ ಅಧಿಕಾರವನ್ನು ಅವರೇಕಾಯಿ ವ್ಯಾಪಾರಸ್ಥರಿಗೆ ಅಡ ಇಟ್ಟು ಬ್ರಿಟಿಷ್ ಗುಲಾಮಗಿರಿ ಮಾಡುತ್ತಿದ್ದೀರೆಯೇ? ಎಂದು ಪುರಸಭೆ ಮುಖ್ಯಾಧಿಕಾರಿಗಳನ್ನು ತರಾಟಗೆ ತೆಗೆದುಕೊಂಡರು.

ತಾಲ್ಲೂಕು ಅಧ್ಯಕ್ಷ ತೆರ್ನಹಳ್ಳಿ ಆಂಜಿನಪ್ಪ ಮಾತನಾಡಿ 3 ತಿಂಗಳು ಕಷ್ಟಪಟ್ಟು ಬೆವರು ಸುರಿಸಿ ರೋಗಗಳಿಂದ ಅವರೇ ಬೆಳೆಯನ್ನು ರಕ್ಷಣೆ ಮಾಡಿಕೊಂಡು ಉತ್ತಮ್ಮ ಫಸಲು ಬೆಳೆದು ಮಾರುಕಟ್ಟೆಗೆ ತರುವ ರೈತರಿಗೆ ಎಂ.ಜಿ ರಸ್ತೆಯಲ್ಲಿ ನಡೆಯುತ್ತಿರುವ ಕಾನೂನು ಬಾಹಿರ ವ್ಯಾಪಾರಸ್ಥರಿಂದ ರೈತರಿಗೆ ರಕ್ಷಣೆ ಇಲ್ಲವೇ? ತೂಕದಲ್ಲಿ ಮೋಸ ಕಮಿಷನ್ ಹಾವಳಿ ಹರಾಜಿನಲ್ಲಿ ಮೋಸ ಅಧಿಕಾರಿಗಳ ಕಣ್ಣ ಮುಂದೆಯೇ? ನಡೆಯುತ್ತಿದ್ದರು ರೈತರ ಸಮಸ್ಯೆ ಬಗ್ಗೆ ಕಣ್ಣು ತೆಗೆದು ನೋಡದ ಅಧಿಕಾರಿಗಳು ಕುರುಡರಾಗಿದ್ದರೆಯೇ? ಇಲ್ಲವೇ? ವ್ಯಾಪಾರಸ್ಥರು ನೀಡುವ ಲಂಚಕ್ಕೆ ರೈತರ ಬೆವರಿನ ಕಷ್ಟವನ್ನು ಅಡ ಇಟ್ಟಿದರಯೇ ಎಂದು ಪ್ರಶ್ನೆ ಮಾಡಿದ ಅವರು ಮೂರು ದಿನದೊಳಗೆ ಅವರೇ ಕಾಯಿ ವಹಿವಾಟನ್ನು ಮಾರುಕಟ್ಟೆಗೆ ಸ್ಥಳಾಂತರಿಸಿ ಇಲ್ಲವೇ ಸೂಕ್ತವಾದ ಜಾಗ ಗುರ್ತಿಸಿ ರೈತರಿಗೆ ನ್ಯಾಯ ಒದಗಿಸಿಕೊಡದೇ ಇದ್ದರೇ? ಅಧಿಕಾರಿಗಳ ರೈತ ವಿರೋಧಿ ಧೋರಣೆ ಖಂಡಿಸಿ ಪುರಸಭೆ ಇಲಾಖೆ ಮುಂದೆ ಬೀದಿ ನ್ಯಾಯಗಳ ಸಮೇತ ಹೋರಾಟ ಮಾಡುವ ಎಚ್ಚರಿಸಿದರು.

ಮನವಿ ಸ್ವೀಕರಿಸಿ ಪುರಸಭೆ ಅಧಿಕಾರಿ ನಾಗರಾಜು ಮಾತನಾಡಿ ಈಗಾಗಲೇ ಮಂಡಿ ಮಾಲೀಕರಿಗೆ ನೋಟಿಸ್ ನೀಡಿದ್ದೇವೆ ಸಮಸ್ಯೆ ಗಂಭೀರ ಸ್ವರೂಪ ಪಡೆಯುವ ಮೊದಲು ಹೆಚ್ಚೆತ್ತುಕೊಳ್ಳದೇ ಇದ್ದರೆ ಆಗುವ ಅನಾವುಗಳಿಗೆ ನೀವೇ ಕಾರಣ ಎಂದು ಹೇಳುವ ಜೊತೆಗೆ ರೈತರಿಗೆ ನ್ಯಾಯ ಕೊಡಿಸುವ ಭರವಸೆಯನ್ನು ನೀಡಿದರು.

ಮನವಿ ನೀಡುವಾಗ ರಾಜ್ಯ ಮುಖಂಡ ಬಂಗವಾದಿ ನಾಗರಾಜು ಗೌಡ, ಜಿಲ್ಲಾಧ್ಯಕ್ಷ ಈಕಂಬಳ್ಳಿ ಮಂಜುನಾಥ, ಅಲವಟಿ ಶಿವು, ಶಫ್ಲೀವುಲ್ಲಾ, ರಾಜೇಂದ್ರ ರೆಡ್ಡಿ, ಮಂಗಸಂದ್ರ ತಿಮ್ಮಣ್ಣ ಗಿರೀಶ್, ರಾಜು, ಮುಂತಾದವರು ಇದ್ದರು.

# ರೋಣೂರು ವೈಕುಂಠಪುರದಲ್ಲಿ ಅದ್ದೂರಿ ಏಕಾದಶಿ ಆಚರಣೆ

**ಕೋಲಾರ,ಡಿ,31–** ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ಸಾವಿರಾರು ವರ್ಷಗಳಷ್ಟು ಪುರಾತನವಾದ ರೋಣೂರು ವೈಕುಂಠಪುರದಲ್ಲಿ ಅರ್ಜುನ ಪ್ರತಿಷ್ಠಾಪಿತ ಶ್ರೀ ಲಕ್ಷ್ಮೀ ವೆಂಕಟೇಶ್ವರಸ್ವಾಮಿ ದೇವಸ್ಥಾನದಲ್ಲಿ ಮಂಗಳವಾರ ವೈಕುಂಠ ಏಕಾದಶಿ ಅದ್ದೂರಿ ಪೂಜಾ ಕಾರ್ಯಕ್ರಮಗಳನ್ನು ಗ್ರಾಮಸ್ಥರು ಹಮ್ಮಿಕೊಂಡಿದ್ದು, ಮಾಜಿ ಸ್ಪೀಕರ್ ಕೆ.ಆರ್.ರಮೇಶ್‌ಕುಮಾರ್ ಭೇಟಿ ನೀಡಿ ಜನರ ಸಂಕಷ್ಟಗಳು ದೂರವಾಗಲಿ, ಒಳ್ಳೆಯ ಮಳೆ,ಬೆಳೆಯಾಗಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಅವರು ಮಾತನಾಡಿ ಈ ದೇವಾಲಯಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ, ಮಹಾಭಾರತ ಕಾಲದ ಈ ದೇವಾಲಯ ಇದಾಗಿದ್ದು, ಈ ಸ್ವಾಮಿಯ ದರ್ಶನದಿಂದ ಮನಸ್ಸಿಗೆ ನೆಮ್ಮದಿ ಸಿಗಲಿದೆ ಎಂದು ತಿಳಿಸಿದರು.

ಕೋಲಾರ ಜಿಲ್ಲೆಯಲ್ಲಿ ಉತ್ತಮ ಮಳೆ,ಬೆಳೆಯಾಗಲಿ ಎಂದು ಪ್ರಾರ್ಥಿಸಿದ್ದಾಗಿ ತಿಳಿಸಿದ ಅವರು, ಜನತೆ ವೈಷಮ್ಯ ಮರೆತು ಪರಸ್ಪರ ಸೌಹಾರ್ದತೆಯ

ವಾತಾವರಣದಲ್ಲಿ ಮುನ್ನಡೆಯಲಿ ಎಂದು ಆಶಿಸಿದರು.

ಮುಂಜಾನೆ 3 ಗಂಟೆಯಿಂದಲೇ ಸಹಸ್ರಾರು ಮಂದಿ ಸ್ವಾಮಿಯ ದರ್ಶನ ಪಡೆದರು. ಬೆಳಗಿನ ಜಾವ 3 ಗಂಟೆಗೆ ಅಭಿಷೇಕ, ಅಲಂಕಾರ ಮತ್ತು ಶ್ರೀವೈಕುಂಠ ಏಕಾದಶಿ ಪ್ರಯುಕ್ತ ಶ್ರೀ ವೈಕುಂಠ ದ್ವಾರ ದರ್ಶನ, ಪ್ರಾಕಾರೋತ್ಸವ, ಶಾಸ್ತ್ರೀಯ ಸಂಗೀತ ಕಾರ್ಯಕ್ರಮ, ಸುಗಮ ಸಂಗೀತ,ಕೊಳಲು ವಾದ್ಯಕಚೇರಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಇಡೀ ದಿನ ಆಯೋಜಿಸಲಾಗಿತ್ತು.



ಧನುರ್ಮಾಸ ಪ್ರಯುಕ್ತ ಬೆಳಗಿನ ಜಾವ 5 ರಿಂದ 6 ಗಂಟೆಯವರೆವಿಗೂ ಧನುರ್ಮಾಸ ಪೂಜೆ, ಮಹಾಮಂಗಳಾರತಿ, ತಿರುಪ್ಪಾವೆ ಪಾರಾಯಣ, ತೀರ್ಥ ಪ್ರಸಾದ ಕಾರ್ಯಕ್ರಮಗಳನ್ನು ನಿತ್ಯ ಆಯೋಜಿಸಲಾಗಿತ್ತು. ಅರ್ಚಕರಾದ ಆರ್.ಮೋಹನ್, ರಾಜಗೋಪಾಲಭಟ್ಟರ್,ಬಾಬುಸ್ವಾಮಿ, ಕೃಷ್ಣಮಾಚಾರ್ ಪೂಜೆಯ ನೇತೃತ್ವ ವಹಿಸಿದ್ದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಬಿ.ಎನ್.ಸುಧೀಂದ್ರ, ಗ್ರಾ.ಪಂ ಸದಸ್ಯ ಆರ್ ಕೆ ಎಸ್ ಮಂಜುನಾಥ, ಜಿಪಂ ಮಾಜಿ ಸದಸ್ಯ ಮ್ಯಾಕಲ್ ನಾರಾಯಣಸ್ವಾಮಿ, ಕೋಚಿಮುಲ್ ನಿರ್ದೇಶಕ ಕೆಕೆ ಮಂಜುನಾಥ್, ದೇವಾಲಯ ಸಮಿತಿ ಅಧ್ಯಕ್ಷ ರಾಮಣ್ಣ, ಕೋಲಾರ ಜಿಲ್ಲಾ ಯಾದವ ಸಂಘದ ಅಧ್ಯಕ್ಷ ನಾರಾಯಣಸ್ವಾಮಿ, ಗ್ರಾಮದ ಮುಖಂಡರಾದ ರವಿ,, ಶ್ರೀನಿವಾಸರೆಡ್ಡಿ, ಗಿರೀಶ್, ವಿಜಯ ಭಾಸ್ಕರ್ ಮತ್ತಿತರರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE